ಶನಿವಾರ 01.11.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 87
Digital Varthe Kannada Daily
Volume 01 - Issue 87
Saturday 01.11.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

## ಅಪ್ರಾಪ್ತ ಮಗಳಿಂದಲೇ ಹೆತ್ತ ತಾಯಿಯ ಕೊಲೆ



**ಬೆಂಗಳೂರು**: ಅಪ್ರಾಪ್ತ ಮಗಳೇ ತನ್ನ ತಾಯಿಯನ್ನು ಹತ್ಯೆ ಮಾಡಿರುವ ಘಟನೆ ಬೆಂಗಳೂರಿನ ಸುಬ್ರಹ್ಮಣ್ಯಪುರದ ಸರ್ಕಲ್ ಮಾರಮ್ಮ ದೇವಸ್ಥಾನದ ಬಳಿ ನಡೆದಿದೆ.

ಲೋನ್ ರಿಕವರಿ ಕಂಪನಿಯಲ್ಲಿ ಸಹಾಯಕಿಯಾಗಿ ಕೆಲಸ ಮಾಡುತ್ತಿದ್ದ ನೇತ್ರಾವತಿ (35) ಕೊಲೆಯಾದ ಮಹಿಳೆ. ಸ್ನೇಹಿತರ ಜೊತೆ ಸೇರಿಕೊಂಡು ತಾಯಿಯನ್ನು ಉಸಿರುಗಟ್ಟಿಸಿ ಕೊಲೆ ಮಾಡಿ ನೇಣು ಹಾಕಿ ಮಗಳು ಹತ್ಯೆ ಮಾಡಿದ್ದಾಳೆ. ಕೃತ್ಯದಲ್ಲಿ ಐವರು ಅಪ್ರಾಪ್ತರು ಭಾಗಿಯಾಗಿರುವುದು ತನಿಖೆಯಿಂದ ತಿಳಿದುಬಂದಿದೆ.

ಅ.25 ರಂದು ಘಟನೆ ನಡೆದಿದೆ. ಪೊಲೀಸರು ಆತ್ಮಹತ್ಯೆ ಪ್ರಕರಣ ದಾಖಲಸಿಕೊಂಡಿದ್ದರು. ನಂತರ ಮೃತಳ ಅಕ್ಕ ಅನಿತಾಗೆ ಮಗಳ ಮೇಲೆ ಅನುಮಾನ ವ್ಯಕ್ತವಾಗಿ ಪೊಲೀಸರಿಗೆ ದೂರು ನೀಡಿದ್ದಾರೆ. ತನ್ನ ತಂಗಿ ಸಾವಿನ ಬಳಿಕ ಮಗಳು ಎಲ್ಲೂ ಕಾಣುತ್ತಿಲ್ಲ ಎಂದು ದೂರು ನೀಡಿದ್ದರು. ಎರಡು ದಿನಗಳ ಬಳಿಕ ಮಗಳು ವಾಪಸ್ ಮನೆಗೆ ಬಂದಿದ್ದಳು.

ನಾನು ಅವತ್ತು ತಾಯಿ ಮನೆಗೆ ಹೋಗಿದ್ದೆ. ಐದು ಜನ ಸ್ನೇಹಿತರನ್ನ ಗಮನಿಸಿದೆ. ಟವಲ್‌ನಲ್ಲಿ ಕುತ್ತಿಗೆ ಬಿಗಿದು ನೇಣುಹಾಕಿದ್ದನ್ನು ನೋಡಿದೆ. ನಂತರ ನನ್ನ ಮೇಲೆ ಬೆದರಿಕೆ ಹಾಕಲಾಗಿತ್ತು. ಭಯಪಟ್ಟು ಫ್ರೆಂಡ್ಸ್ ಮನೆಗೆ ತೆರಳಿದ್ದೆ ಎಂದು ಮೃತ ನೇತ್ರಾವತಿ ಮಗಳು ತಿಳಿಸಿದ್ದಳು.

ಈ ಬಗ್ಗೆ ಅನಮಾನ ವ್ಯಕ್ತವಾದ ಹಿನ್ನಲೆ ಮೃತ ಮಹಿಳೆ ಅಕ್ಕ ದೂರು ನೀಡಿದ್ದರು. ತನಿಖೆಯಲ್ಲಿ ಮಗಳಿಂದ ಕೊಲೆಯಾಗಿದೆ ಎಂಬುದು ಬಯಲಾಗಿದೆ. ಮನೆಗೆ ಸ್ನೇಹಿತರು ಬಂದಿದ್ದಕ್ಕೆ ಪೊಲೀಸರಿಗೆ ಕರೆ ಮಾಡುವುದಾಗಿ ತಾಯಿ ಹೇಳಿದ್ದಳು. ಆಗ ಪುತ್ರಿ ಸ್ನೇಹಿತರೊಟ್ಟಿಗೆ ಸೇರಿಕೊಂಡು ತಾಯಿಯ ಹತ್ಯೆ ಮಾಡಿದ್ದಾಳೆ. ಸುಬ್ರಹ್ಮಣ್ಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನ.1ರಂದು ಜಿಲ್ಲಾ, ತಾಲೂಕು ಗಳಲ್ಲಿ ಲಿಂಗೈಕ್ಯ ಭೋವಿ ಶರಣಬಸಪ್ಪ ಅಪ್ಪಂಗಳ ಪುಣ್ಯಸ್ಮರಣೆ ಆಚರಣೆಗೆ ಕರೆ



**ಬೆಂಗಳೂರು**: ಬಾಗಲಕೋಟೆ ಕಾರಿಹಳ್ಳ ಭೋವಿ ಗುರುಪೀಠದ ಲಿಂಗೈಕ್ಯ ಶರಣಬಸವ ಮಹಾಸ್ವಾಮಿ ಅವರ 16ನೇ ವರ್ಷದ ಪುಣ್ಯಸ್ಮರಣೆ ಪ್ರಯುಕ್ತ ನ.1 ರಂದು ರಾಜ್ಯದ ಪ್ರತಿ ತಾಲೂಕು ಜಿಲ್ಲಾ ಕೇಂದ್ರಗಳಲ್ಲಿ ಆಚರಿಸುವಂತೆ ಶರಣ ಬಸವ ಅಪ್ಪಂಗಳವರ ಆಶ್ರಮ ಕಾರ್ಯದರ್ಶಿ ಸಂಗಮೇಶ್ ಕರೆ ನೀಡಿದಾರೆ.

ನಗರದ ಪ್ರೆಸ್ ಕ್ಲಬ್ ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಲಿಂಗೈಕ್ಯ ಶರಣಬಸವ ಶ್ರೀಗಳು ಅಸಂಘಟಿತವಾದ ಸಮಾಜವನ್ನು ಸಂಘಟಿಸಿದ ಮಹಾಯೋಗಿದ್ದಾರೆ. ದೀಪದಿಂದ ದೀಪ ಹಚ್ಚಿದ ಕಾಯಕಯೋಗಿ ಕಲ್ಲು ಬಂಡೆ ಹೊಡೆಯುವವರ ಬದುಕಿಗೆ ದಾರಿ ದೀಪವಾಗಿದ್ದಾರೆ ಎಂದು ತಿಳಿಸಿದ್ದಾರೆ.

ಭೋವಿ ಸಮುದಾಯದಲ್ಲಿ ಶಿಕ್ಷಣ ಕ್ರಾಂತಿ ಮಾಡುವಲ್ಲಿ ಪ್ರಮುಖರಾಗಿರುವ ಶರಣಬಸವ ಶ್ರೀಗಳು, ಪಾದರಸದಂತೆ ಚಲಿಸಿ ಸಮಾಜದ ಸುಧಾರಣೆಗಾಗಿ ಜನರ ಹತ್ತಿರಕ್ಕೆ ತಾವೆ ಹೋಗಿ ಅವರ ಮಧ್ಯದಲ್ಲಿ ಬೆರೆತು ಅವರ ಮಕ್ಕಳಿಗೆ ಶಿಕ್ಷಣ ಸಾಮಾಜಿಕ ಸುಧಾರಣೆಗಾಗಿ ತಿಳುವಳಿಕೆ ನೀಡುತ್ತಿದ್ದರು. ಸಮುದಾಯದ ಏಳಿಗೆಗಾಗಿ ಶ್ರಮಿಸುತ್ತಾ ಹೆಜ್ಜೆ ಹೆಜ್ಜೆಗೂ ಸಮುದಾಯಕ್ಕೆ ಸದಾಕಾಲವೂ ಮಾರ್ಗದರ್ಶಿಗಳಾಗಿ ನಿಂತವರಾಗಿದ್ದಾರೆ. ಸಕಲ ಸಮುದಾಯದ ವಿದ್ಯಾರ್ಥಿಗಳಿಗೆ ಗುರುಪೀಠದಲ್ಲಿ ದಿನನಿತ್ಯ ದಾಸೋಹ ಕಾರ್ಯವನ್ನು ನಿರಂತರವಾಗಿ ಕಾರ್ಯರೂಪಕ್ಕೆ ಮಹಾ ಪುರುಷರಾಗಿದ್ದಾರೆ ಎಂದು ಅವರು ಹೇಳಿದರು.

ವಕೀಲ ಶ್ರೀಧರ್ ಎಲ್ ಮಾತನಾಡಿ, ಲಿಂಗೈಕ್ಯ ಶರಣಬಸವ ಶ್ರೀಗಳು ರಾಜಕೀಯ ಕ್ಷೇತ್ರದ ಎಲ್ಲಾ ಸಮಾಜ ಬಾಂಧವರನ್ನು ಒಂದುಗೂಡಿಸಿ ಸಮಾಜದ ಮಾರ್ಗಸೂಚಕರಾಗಿ ನಮ್ಮನ್ನು ಒಗ್ಗೂಡಿಸಿದ್ದಾರೆ. ಭೋವಿ ಸಮಾಜದ ಪ್ರತಿ ಮನೆ ಮನೆಗಳಲ್ಲಿ ಮನಃ ತಲುಪುವಂತೆ ಧಾರ್ಮಿಕ ಕ್ರಾಂತಿಯನ್ನು ಮಾಡಿದ ಪೂಜ್ಯಶ್ರೀಗಳು ಸಮಾಜಕ್ಕೆ ಮಾರಕವಾದ ನರಹತ್ಯೆ, ಪ್ರಾಣಿಬಲಿ, ದುಶ್ಚಟ ಗಳಂತ ವ್ಯಸನಿ ಗಳನ್ನು ಇಲಕಲ್ ಪೀಠದ ಮಹಾಂತ ಶಿವಯೋಗಿಗಳಿಂದ ಪ್ರೇರಣೆ ಪಡೆದು ಸಮಾಜದ ಪ್ರತಿಯೊಬ್ಬರಿಂದ ತ್ಯಾಗ ಮಾಡಲು ಪಣತೊಟ್ಟವರು ಎಂದು ಅವರು ಹೇಳಿದರು.

ರಾಜ್ಯ ಪ್ರಶಸ್ತಿ ವಿಜೇತ ಆನಂದ್ ಸಿ ತಿರುಮಲ ಮಾತನಾಡಿ, ಲಿಂಗೈಕ್ಯ ಶರಣಬಸವ ಶ್ರೀಗಳು ಹಲವಾರು ವರ್ಷಗಳಿಂದಲೂ ದೀಪದಿಂದ ದೀಪ ಹಚ್ಚುವ ಮೂಲಕ ಇಡೀ ರಾಜ್ಯದ ಎಲ್ಲಾ ಗ್ರಾಮದ ತಾಲೂಕು ಕೇಂದ್ರಗಳಲ್ಲಿ ವಚನ ಜ್ಯೋತಿ ರಥ ಯಾತ್ರೆ ಯನ್ನು ಆಯೋಜಿಸುವ ಮೂಲಕ ಭೋವಿ ಸಮಾಜದ ವನ್ನು ಸಂಘಟಿಸಿದವರಾಗಿದ್ದಾರೆ ಎಂದು ತಿಳಿಸಿದ್ದಾರೆ.

ಸಮುದಾಯದ ಮುಖಂಡ ಗೌತಮ್ ವೆಂಕಿ ಮಾತನಾಡಿ, ಲಿಂಗೈಕ್ಯ ಶರಣಬಸವ ಶ್ರೀಗಳು ಧ್ಯಾನ, ಉಪವಾಸದಲ್ಲಿ ತೊಡಗಿಸಿಕೊಂಡು ಧಾರ್ಮಿಕ ಸುಧಾರಣೆಯಲ್ಲಿ ತೊಡಗಿದ್ದರು. ಅವರ ಚಿಂತನಾ ಮಾರ್ಗದರ್ಶನದಲ್ಲಿ ನಾವೆಲ್ಲರೂ ಸಾಗಬೇಕಾದ ಅಗತ್ಯವಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಶ್ರೀಧರ್ ಎಲ್, ರಾಜ್ಯ ಪ್ರಶಸ್ತಿ ವಿಜೇತ ಆನಂದ ಸಿ.ತಿರುಮಲ, ರಂಗನಾಥ್ ಲಕ್ಷ್ಮಣ ವಡ್ಡರ, ಮುನಿಕುಮಾರ್, ಗೌತಮ್ ವೆಂಕಿ, ಮಂಜುನಾಥ್ ಪತ್ರ ಕರ್ತರು, ಕೃಷ್ಣ, ಮಹಾಂತೇಶ್, ಅಶೋಕ್, ಬಾಬು ಮತ್ತಿತರರು ಹಾಜರಿದ್ದರು.

## ಗ್ರಾ.ಪಂ ಅಧ್ಯಕ್ಷರ ಅಧಿಕಾರ ಚಲಾವಣೆ ಆರೋಪ - ಪಿಡಿಒ ಅಮಾನತು



**ಬೀದರ್**: ಗ್ರಾ.ಪಂ ಅಧ್ಯಕ್ಷರ ಅಧಿಕಾರ ಚಲಾವಣೆ ಮಾಡಿದ ಆರೋಪದ ಮೇಲೆ ಪಿಡಿಒ (PDO) ಅನ್ನು ಅಮಾನತು ಮಾಡಲಾಗಿದೆ

ಬೀದರ್ ಜಿಲ್ಲೆಯ ಔರಾದ್ ತಾಲೂಕಿನ ಹೆಡಗಾಪುರ ಗ್ರಾಮ ಪಂಚಾಯತಿ ಪಿಡಿಒ ಮಹಾಲಕ್ಷ್ಮಿ ಸೇವೆಯಿಂದ ಅಮಾನತಾಗಿದ್ದು, ಜಿಲ್ಲಾ ಪಂಚಾಯತ್ ಸಿಇಒ ಡಾ.ಗಿರೀಶ್ ಬದೋಲೆ ಅಮಾನತು ಮಾಡಿ ಆದೇಶ ಹೊರಡಿಸಿದ್ದಾರೆ

ಪಿಡಿಓ ನಿಯಮಿತವಾಗಿ ಗ್ರಾಮ ಪಂಚಾಯತಿ ಸಾಮಾನ್ಯ ಸಭೆ ಜರುಗಿಸಲು ಕ್ರಮ ಕೈಗೊಂಡಿಲ್ಲ, ಕರ್ತವ್ಯ ಲೋಪ ಹಾಗೂ ಪಂಚಾಯತ ರಾಜ್ ಅಧಿನಿಯಮದ ನಿಯಮಗಳಿಗೆ ವಿರುದ್ಧ ಕೆಲಸ ಮಾಡಿದ್ದಾರೆ ಎಂದು ಪತ್ರದಲ್ಲಿ ಉಲ್ಲೇಖಿಸಲಾಗಿದೆ.

ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸದೇ ಇರುವುದು ದೃಢಪಟ್ಟ ಹಿನ್ನೆಲೆ ಪಿಡಿಒ ಮಹಾಲಕ್ಷ್ಮಿ ಅವರನ್ನು ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ, ಜಿಪಂ ಸಿಇಒ ಅಮಾನತುಗೊಳಿಸಿದ್ದಾರೆ

## ಗ್ಯಾಂಗ್ ವಾರ್ - ಕುಖ್ಯಾತ ರೌಡಿಶೀಟರ್ ಸಾವು



**ದೆಹಲಿ:** ಇಲ್ಲಿನ ಸೀಲಾಂಪುರದಲ್ಲಿ ನಡೆದ ಗುಂಡಿನ ಚಕಮಕಿಯಲ್ಲಿ ಕುಖ್ಯಾತ ರೌಡಿಶೀಟರ್ ಸಾವನ್ನಪ್ಪಿದ್ದಾನೆ.

ಮೃತ ರೌಡಿಶೀಟರ್‌ನ್ನು ಮಿಸ್ಬಾ (22) ಎಂದು ಗುರುತಿಸಲಾಗಿದ್ದು, ಈತನ ಮೇಲೆ ಕೊಲೆ, ದರೋಡೆ ಸೇರಿದಂತೆ ಏಳು ಪ್ರಕರಣಗಳು ದಾಖಲಾಗಿದ್ದವು.

ಮಂಗಳವಾರ (ಅ.28) ರಾತ್ರಿ ಸೀಲಾಂಪುರದ ಜಾಮಾ ಮಸೀದಿಯ ಬಳಿಯ ದರೋಡೆಕೋರ ಛೇನು ಮನೆಯ ಬಳಿ ಪರಸ್ಪರ ಗುಂಡಿನ ದಾಳಿ ನಡೆದಿದೆ. ಅಪರಿಚಿತ ವ್ಯಕ್ತಿಗಳು ರೌಡಿಶೀಟರ್ ಮೇಲೆ ಮನಬಂದಂತೆ ಗುಂಡಿನ ದಾಳಿ ನಡೆಸಿದ್ದು, 20 ಸುತ್ತು ಗುಂಡು ಹಾರಿಸಿದ್ದಾರೆ ಎನ್ನಲಾಗಿದೆ. ಮಾಹಿತಿ ತಿಳಿಯುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಆಗಮಿಸಿದ್ದು, ಕೂಡಲೇ ರೌಡಿಶೀಟರ್‌ನ್ನು ಜೆಪಿಸಿ ಆಸ್ಪತ್ರೆಗೆ ಸಾಗಿಸಿದರು. ಆದರೆ ವೈದ್ಯರು ಮೃತಪಟ್ಟಿರುವುದಾಗಿ ತಿಳಿಸಿದರು. ಮೃತ ಮಿಸ್ಬಾ ಹಾಶಿಮ್ ಬಾಬಾ ಗ್ಯಾಂಗ್‌ನೊಂದಿಗೆ ಸಂಬಂಧ ಹೊಂದಿದ್ದು, ಇತ್ತೀಚಿಗೆ ಜೈಲಿನಿಂದ ಬಿಡುಗಡೆಯಾಗಿದ್ದ ಎಂದು ತಿಳಿದುಬಂದಿದೆ. ಸದ್ಯ ಘಟನಾ ಸ್ಥಳದಲ್ಲಿ ವಿಧಿವಿಜ್ಞಾನ ತಂಡಗಳು ಸಾಕ್ಷ್ಯಗಳನ್ನು ಸಂಗ್ರಹಿಸಿವೆ. ಈ ಸಂಬಂಧ ಪ್ರಕರಣ ದಾಖಲಾಗಿದ್ದು, ಆರೋಪಿಗಳ ಹುಡುಕಾಟಕ್ಕೆ ದೆಹಲಿ ಪೊಲೀಸರು ಹಲವು ತಂಡಗಳನ್ನು ರಚಿಸಿದ್ದಾರೆ

## ವೈದ್ಯಕೀಯ ಸೇವಾ ಕ್ಷೇತ್ರದಲ್ಲಿ ಪ್ಯಾರಾ ಮೆಡಿಕಲ್ ಸಿಬ್ಬಂದಿಗಳ ಪಾತ್ರವು ನಿರ್ಣಾಯಕ ಬಳ್ಳೇಕೆರೆ ಮಂಜುನಾಥ್,



ಪಟ್ಟಣದ ವೈವಿದ್ಯ ಪ್ಯಾರಾ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳ ವಾರ್ಷಿಕೋತ್ಸವ ಸಮಾರಂಭ ವೈವಿದ್ಯೋತ್ಸವ - 2025ನ್ನು ಜ್ಯೋತಿ ಬೆಳಗಿಸಿ ಉದ್ಘಾಟಿಸಿ ಮಾತನಾಡಿದ ಅವರು ಆಸ್ಪತ್ರೆಗಳಿಗೆ ಚಿಕಿತ್ಸೆಗಾಗಿ ಬರುವ ಬಡ ರೋಗಿಗಳಿಗೆ ತಮ್ಮ ನಗುಮುಗದೊಂದಿಗೆ ಪ್ರಾಮಾಣಿಕವಾದ ಸೇವೆಯನ್ನು ನೀಡುತ್ತಾ , ವೈದ್ಯಕೀಯ ಕ್ಷೇತ್ರದಲ್ಲಿ ತಮ್ಮ ಅಪಾರವಾದ ಕೊಡುಗೆಯನ್ನು ನೀಡುತ್ತಿರುವ ಪ್ಯಾರಾ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳಿಗೆ ಉಜ್ವಲವಾದ ಭವಿಷ್ಯವಿದೆ. ಪ್ಯಾರಾ ಮೆಡಿಕಲ್ ಶಿಕ್ಷಣವನ್ನು ಮುಗಿಸಿದ ಪ್ರತಿಯೊಬ್ಬ ವಿದ್ಯಾರ್ಥಿಗೂ ವೈದ್ಯಕೀಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸಲು ಉತ್ತಮವಾದ ಅವಕಾಶಗಳಿರುವುದರಿಂದ, ಪ್ಯಾರಾ ಮೆಡಿಕಲ್ ವಿದ್ಯಾರ್ಥಿಗಳು ತಾವು ಶಿಕ್ಷಣವನ್ನು ಸಂಪೂರ್ಣಗೊಳಿಸಿಕೊಂಡ ನಂತರ ಆಸ್ಪತ್ರೆಗಳಿಗೆ ಚಿಕಿತ್ಸೆ ಪಡೆಯಲು ಬರುವ ಮಧ್ಯಮ ವರ್ಗ ಹಾಗೂ ಬಡ ಕುಟುಂಬದ ಜನರಿಗೆ ಬದ್ಧತೆಯಿಂದ ಸೇವೆ ನೀಡಿ, ಆ ಭಗವಂತನು ಮೆಚ್ಚುವಂತೆ ಕೆಲಸ ಮಾಡಬೇಕು ಎಂದು ಬಳ್ಳೆಕೆರೆ ಮಂಜುನಾಥ್ ಕಿವಿಮಾತು ಹೇಳಿದರು.

ನಂತರ ಮಾತನಾಡಿದ ಪಟ್ಟಣದ ಖ್ಯಾತ ವಕೀಲರಾದ ರಮ್ಯಾ ರವರು ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿ ಆರೋಗ್ಯ ಕ್ಷೇತ್ರದಲ್ಲಿ ಉತ್ತಮವಾದ ಸೇವೆ ಸಲ್ಲಿಸಲು ಪ್ಯಾರಾ ಮೆಡಿಕಲ್ ಸಿಬ್ಬಂದಿಗಳಿಗೆ ವಿಫಲವಾದ ಅವಕಾಶಗಳಿವೆ ಆದ್ದರಿಂದ ಪ್ಯಾರಾ ಮೆಡಿಕಲ್ ಶಿಕ್ಷಣ ಮುಗಿಸಿರುವ ವಿದ್ಯಾರ್ಥಿಗಳು ಹೆಚ್ಚಿನ ಹಣ ಸಂಪಾದಿಸಲು ಆಸೆ ಪಡೆದೆ ತಮಗೆ ಸಿಗುವ ಅವಕಾಶ ದಲ್ಲಿಯೇ ಬಡಜನರಿಗೆ ಉತ್ತಮ ವಾದ ಸೇವೆಯನ್ನು ಸಲ್ಲಿಸಲು ಮುಂದಾಗಬೇಕು ಎಂದು ಕಿವಿಮಾತು ಹೇಳಿದರು.

ಸಾಹಿತಿಗಳು ಹಾಗೂ ಪತ್ರಕರ್ತರಾದ ಬಲ್ಲೇನಹಳ್ಳಿ ಮಂಜುನಾಥ್ ರವರು ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಮಾಜಿಅಧ್ಯಕ್ಷ ಕೆ.ಆರ್.ನೀಲಕಂಠ, ವೈವಿದ್ಯಾ ಪ್ಯಾರಾ ಮೆಡಿಕಲ್ ಕಾಲೇಜಿನ ಕಾರ್ಯದರ್ಶಿ ಚಂದ್ರಮೋಹನ್ ಕಾರ್ಯಕ್ರಮದಲ್ಲಿ ಮಾತನಾಡಿದರು.

ಕಾಲೇಜಿನ ಪ್ರಾಂಶುಪಾಲೆ ಡಾ.ಕಾವ್ಯಶ್ರೀ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

ಪತ್ರಕರ್ತ ಸ್ಯೆಯ್ಯದ್ ಖಲೀಲ್, ಉಪನ್ಯಾಸಕರಾದ ಅರ್ಪಿತಾ, ಬಿಂದುಶ್ರೀ, ರಕ್ಷಿತಾ, ವಿದ್ಯಾರ್ಥಿ ನಾಯಕರಾದ ರಂಜಿತಾ, ಅಮೃತಾ, ಹರ್ಷಿತಾ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ವಿದ್ಯಾರ್ಥಿ ಗಳು ನೀಡಿದ ಸಾಂಸ್ಕೃತಿಕ ಕಾರ್ಯಕ್ರಮಗಳು ಎಲ್ಲರ ಗಮನ ಸೆಳೆದವು.

ಇದೇ ಸಂದರ್ಭದಲ್ಲಿ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

## ವರದಕ್ಷಿಣ ಕಿರುಕುಳಕ್ಕೆ ಯುವತಿ ಬ*ಲಿ..ಗಂಡ, ಅತ್ತೆ, ಮಾವ, ನಾದಿನಿ ಎಲ್ಲರೂ ಪರಾರಿ



ಗಂಡನ ಮನೆಯಲ್ಲಿ ಅನುಭವಿಸಿದ ಕಿರುಕುಳದಿಂದ ಬೇಸರಗೊಂಡು ಕಳೆನಾಶಕ ಸೇವಿಸಿದ ಗೃಹಿಣಿ ಪೂಜಾ (30) ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಜೀವವನ್ನು ಕಳೆದುಕೊಂಡಿದ್ದಾಳೆ. ಈ ದುರಂತ ನಡೆದಿದ್ದು ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ ತಾಲೂಕಿನ ಎನ್.ಆರ್.ಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿದ್ದು, ಸಾವಿನ ಸುದ್ದಿ ತಿಳಿದುಕೊಂಡ ತಕ್ಷಣ ಗಂಡ ಶರತ್, ಅತ್ತೆ, ಮಾವ ಮತ್ತು ಸಹೋದರಿ ಸೇರಿದಂತೆ ಕುಟುಂಬಸ್ಥರು ಮೃತದೇಹ ಮತ್ತು 2.5 ವರ್ಷದ ಮಗುವನ್ನು ಬಿಟ್ಟು ಪರಾರಿಯಾಗಿದ್ದಾರೆ. ಪೂಜಾಳ ತಾಯಿ ಮನೆಯವರು ಆಕ್ರಂದನ ಮಧ್ಯೆಯೇ ಮಗುವನ್ನು ರಕ್ಷಿಸಲು ಯತ್ನಿಸುತ್ತಿದ್ದಾರೆ. ಪೊಲೀಸ್ ತನಿಖೆಯಲ್ಲಿ ಕಿರುಕುಳದ ಆರೋಪಗಳು ಬಹಿರಂಗವಾಗುತ್ತಿದ್ದು, ಆತ್ಮಹತ್ಯೆಗೆ ಅಡ್ಡಿಹೊಡೆದಿರುವುದಾಗಿ ದೂರು ದಾಖಲಾಗಿದೆ.

ತೀರ್ಥಹಳ್ಳಿ ತಾಲೂಕಿನ ಕೋಣಂದೂರು ಸಮೀಪದ ಶಂಕರಳ್ಳಿ ನಿವಾಸಿಯಾಗಿದ್ದ ಈಶ್ವರಪ್ಪ ಅವರ ಪುತ್ರಿ ಪೂಜಾ ಅವರು ಮೂರು ವರ್ಷಗಳ ಹಿಂದೆ ಮಾವಿನಕೆರೆ ಶೆಟ್ಟಿಕೊಪ್ಪದ ಶರತ್ ಅವರನ್ನು ಮದುವೆಯಾಗಿದ್ದರು. ಈ ದಂಪತಿಗೆ 2.5 ವರ್ಷದ ಗಂಡು ಮಗು ಇದ್ದರೂ, ಗಂಡನ ತಂದೆ, ತಾಯಿ, ಸಹೋದರಿ ಸೇರಿದಂತೆ ಕುಟುಂಬಸ್ಥರು ಪೂಜಾಳಿಗೆ ನಿರಂತರ ಕಿರುಕುಳ ನೀಡುತ್ತಿದ್ದರು ಎಂಬ ಆರೋಪವಿದೆ. ದೈನಂದಿನ ಜೀವನದಲ್ಲಿ ಸಣ್ಣ ಸಣ್ಣ ವಿಷಯಗಳಿಗೆ ತರ್ಕಹೀನ ಟೀಕೆಗಳು, ಮಾನಸಿಕ ಹಿಂಸೆಯಿಂದ ಪೂಜಾ ತೀವ್ರ ಆತಂಕಕ್ಕೆ ಒಳಗಾಗಿದ್ದಳು.

ಈ ಕಿರುಕುಳದಿಂದ ಬೇಸರಗೊಂಡ ಪೂಜಾ ಹಲವು ಬಾರಿ ತನ್ನ ತಾಯಿ ಮನೆಗೆ ಬಂದು ಸಂಕಷ್ಟಗಳನ್ನು ತಿಳಿಸಿದ್ದಳು. "ನಾನು ಇಲ್ಲಿ ಇರಲು ಸಾಧ್ಯವಿಲ್ಲ, ಎಲ್ಲರೂ ನನ್ನ ಮೇಲೆ ಕಿರುಕುಳ ಮಾಡುತ್ತಾರೆ" ಎಂದು ಅಳುತ್ತಾ ಹೇಳಿದ್ದಳು. ಆದರೂ, ತಾಯಿ ಮನೆಯವರು ಸಮಾಧಾನಪಡಿಸಿ ಮತ್ತೆ ಗಂಡನ ಮನೆಗೆ ಕಳುಹಿಸಿದ್ದರು. ಇದೇ ಮನೆಯಲ್ಲಿ ಕಳೆದ ವಾರ ಕಿರುಕುಳ ತೀವ್ರಗೊಂಡಾಗ, ಪೂಜಾ ಕಳೆನಾಶಕ ಸೇವಿಸಿ ಆತ್ಮಹತ್ಯೆಗೆ ಶರಣಾಗಿದ್ದಳು.

ಪೂಜಾ ಕಳೆನಾಶಕ ಸೇವಿಸಿದ್ದನ್ನು ಮನೆಯವರು ಗಮನಿಸಿ ತಕ್ಷಣ ಶಿವಮೊಗ್ಗದ ಖಾಸಗಿ ಆಸ್ಪತ್ರೆಗೆ ದಾಖಲು ಮಾಡಿದ್ದರು. ಆದರೆ ಚಿಕಿತ್ಸೆಯ ಹೊರತಾಗಿಯೂ ಅವಳ ಸ್ಥಿತಿ ಗಂಭೀರವಾಗಿತ್ತು. ಕೆಲವೇ ಗಂಟೆಗಳಲ್ಲಿ ಪೂಜಾ ಕೊನೆಯುಸಿರೆಳೆದಿದ್ದಾಳೆ. ಈ ಸುದ್ದಿ ತಿಳಿದುಕೊಂಡ ತಾಯಿ ಮನೆಯವರು ಆಸ್ಪತ್ರೆಗೆ ಧಾವಿಸಿದಾಗ, ಗಂಡ ಶರತ್, ಅತ್ತೆ, ಮಾವ ಮತ್ತು ಸಹೋದರಿ ಎಲ್ಲರೂ ಮೃತದೇಹದ ಬಳಿ ಸೇರದೇ, 2.5 ವರ್ಷದ ಮಗುವನ್ನು ಬಿಟ್ಟು ಪರಾರಿಯಾಗಿದ್ದಾರೆ. ಪೂಜಾಳ ತಾಯಿ ಈಶ್ವರಪ್ಪ ಅವರು, "ನಮ್ಮ ಮಗಳನ್ನು ಕಳೆದುಕೊಂಡ ನೋವು ಸಾಕು, ಈಗ ಮೊಮ್ಮಗ ಮತ್ತು ಮೃತದೇಹಕ್ಕೂ ನಾವೇ ನೋಡಬೇಕೇ?" ಎಂದು ಅಕ್ರಂದಿಸುತ್ತಿದ್ದಾರೆ.

ಎನ್.ಆರ್.ಪುರ ಪೊಲೀಸ್ ಠಾಣೆಯಲ್ಲಿ ಪೂಜಾಳ ತಾಯಿ ಮನೆಯವರು ದೂರು ದಾಖಲಿಸಿದ್ದಾರೆ. ದೂರಿನಲ್ಲಿ ಗಂಡನ ಕುಟುಂಬಸ್ಥರ ವಿರುದ್ಧ ಕಿರುಕುಳ, ಆತ್ಮಹತ್ಯೆಗೆ ಅಡ್ಡಿಹೊಡೆದಿರುವುದು, ಮಹಿಳಾ ಸುರಕ್ಷತಾ ಕಾಯ್ದೆಯಡಿ ಕೇಸ್ ದಾಖಲಾಗಿದೆ. ಪೊಲೀಸ್ ಇನ್‌ಸ್ಪೆಕ್ಟರ್ "ಪೂಜಾಳ ತಾಯಿ ಮನೆಯಿಂದ ಬಂದವರ ಹೇಳಿಕೆಗಳು ದಾಖಲಿಸಿದ್ದೇವೆ. ಪರಾರಿಯಾದವರನ್ನು ಹುಡುಕುತ್ತಿದ್ದೇವೆ. ಮಗುವನ್ನು ಸುರಕ್ಷಿತವಾಗಿ ರಕ್ಷಿಸಿದ್ದೇವೆ. ತನಿಖೆಯಲ್ಲಿ ಹೊಸ ವಿವರಗಳು ಬಹಿರಂಗವಾಗುತ್ತಿವೆ."

## ಆಡಿಷನ್‌ಗೆ 17 ಮಕ್ಕಳ ಕರೆಸಿ ಒತ್ತೆ ಇಟ್ಟುಕೊಂಡಿದ್ದವ ಗುಂಡಿಗೆ ಬ*ಲಿ



ಮುಂಬೈಯ ಪೊವಾಯ್ ಪ್ರದೇಶದ ಆರ್‌ಎ ಸ್ಟುಡಿಯೋದಲ್ಲಿ ವೆಬ್ ಸೀರೀಸ್ ಆಡಿಷನ್ ಆಕರ್ಷಣೆಯಲ್ಲಿ ಕರೆಸಿಕೊಂಡ 17 ಮಕ್ಕಳು ಸೇರಿದಂತೆ 19 ಜನರನ್ನು ಒತ್ತೆಯಾಳಾಗಿ ಇಟ್ಟುಕೊಂಡು ಹೈಡ್ರಾಮಾ ನಿರ್ವಹಿಸಿದ್ದ ಆರೋಪಿ ರೋಹಿತ್ ಆರ್ಯ (38) ಅವರನ್ನು ಪೊಲೀಸ್ ಎನ್‌ಕೌಂಟರ್‌ನಲ್ಲಿ ಗುಂಡಿಗೆ ತಾಗಿಸಿ ಸಾವಿನಡೆಗೆ ಕೊಟ್ಟಿದ್ದಾರೆ. ಅದೃಷ್ಟವಶಾತ್, ಎಲ್ಲಾ ಒತ್ತೆಯಾಳುಗಳು ಸುರಕ್ಷಿತರಾಗಿ ಮನೆಗೆ ಬಂದಿದ್ದಾರೆ. ಈ ಘಟನೆಯು ಮಹಾರಾಷ್ಟ್ರ ಸರ್ಕಾರದ ಬಿಲ್‌ಗಳ ತಡೆಯಾದಿಯಿಂದ ಆರ್ಯ ಅವರ ಹಣಕಾಸಿನ ಸಮಸ್ಯೆಯಿಂದ ಉಂಟಾದಂತೆ ತೋರುತ್ತಿದೆ.

ಗುರುವಾರ (ಅಕ್ಟೋಬರ್ 30) ಮಧ್ಯಾಹ್ನ 1:30ರ ಸುಮಾರು, ಪುಣೆಯ ರೋಹಿತ್ ಆರ್ಯ ಅವರು ವೆಬ್ ಸೀರೀಸ್ ಆಡಿಷನ್ ಎಂದು ಹೇಳಿ ಮಹಾರಾಷ್ಟ್ರದ ವಿವಿಧ ಭಾಗಗಳಿಂದ 17 ಮಕ್ಕಳನ್ನು (10ರಿಂದ 12 ವರ್ಷ ವಯಸ್ಸು) ಮತ್ತು ಇತರ ಎರಡು ಜನರನ್ನು (ಒಬ್ಬ ವೃದ್ಧ ಮತ್ತು ಒಬ್ಬ ಸಾಮಾನ್ಯ ವ್ಯಕ್ತಿ) ಆರ್‌ಎ ಸ್ಟುಡಿಯೋಗೆ ಕರೆಸಿದ್ದರು. ಆದರೆ ಅವರನ್ನು ಹೊರಬಿಡದೆ ಒತ್ತೆಯಾಳಾಗಿ ಇಟ್ಟುಕೊಂಡು, ಸಾಮಾಜಿಕ ಮಾಧ್ಯಮಗಳಲ್ಲಿ ವೀಡಿಯೋ ಬಿಡುಗಡೆ ಮಾಡಿದ್ದಾರೆ. ವೀಡಿಯೋದಲ್ಲಿ ಆರ್ಯ, "ನಾನು ರೋಹಿತ್ ಆರ್ಯ. ಸ್ವಯಂ ಹತ್ಯೆ ಮಾಡುವ ಬದಲು ಈ ಮಕ್ಕಳನ್ನು ಒತ್ತೆಯಾಳಾಗಿ ಇಟ್ಟುಕೊಂಡಿದ್ದೇನೆ. ನನಗೆ ಹಣ ಬೇಡ, ಉಗ್ರನಲ್ಲ. ಕೆಲವರೊಂದಿಗೆ ಮಾತನಾಡಿ ಕೆಲ ಪ್ರಶ್ನೆಗಳಿಗೆ ಉತ್ತರ ಪಡೆಯಬೇಕು.

ಅಡ್ಡಿಪಡಿಸಿದರೆ ಸ್ಟುಡಿಯೋಗೆ ಬೆಂಕಿ ಹಚ್ಚಿ, ನಾನು ಮತ್ತು ಮಕ್ಕಳು ಸಾಯುತ್ತೇವೆ. ಹಾನಿಗೆ ನಾನು ಜವಾಬ್ದಾರನಲ್ಲ" ಎಂದು ಬೆದರಿಸಿದ್ದಾರೆ. ಜೊತೆಗೆ, ಬೇಡಿಕೆ ಈಡೇರಿದರೆ ಮಕ್ಕಳೊಂದಿಗೆ 'ಕಾರ್ಯಕ್ರಮ' ಚಿತ್ರೀಕರಿಸುತ್ತೇನೆ ಎಂದೂ ಹೇಳಿದ್ದಾರೆ.

ಪೊಲೀಸ್ ಇನ್‌ಸ್ಪೆಕ್ಟರ್ ಜೀವನ್ ಸೋನಾವಣೆ ಅವರ ಪ್ರಕಾರ, ಆರ್ಯ ಮಾನಸಿಕವಾಗಿ ಅಸ್ಥಿರರಾಗಿದ್ದರು. ಅವರು ಏರ್ ಗನ್, ಕೆಮಿಕಲ್‌ಗಳು ಮತ್ತು ಲೈಟರ್ ಹೊಂದಿದ್ದರು, ಇದು ಹೆಚ್ಚಿನ ಹಾನಿಯ ಯೋಜನೆಯನ್ನು ಸೂಚಿಸುತ್ತದೆ.

ಘಟನೆಯ ಸುದ್ದಿ ಪೊಲೀಸ್‌ಗೆ ಮಧ್ಯಾಹ್ನ 2 ಗಂಟೆಗೆ ತಿಳಿದು, ಅವರು ಆರ್ಯರೊಂದಿಗೆ ಸಂಧಾನಕ್ಕೆ ಯತ್ನಿಸಿದರು. ಜಂಟ್ ಕಮಿಷನರ್ ಸತ್ಯನಾರಾಯಣ ಚೌಧರಿ ಅವರು ಹೇಳಿದಂತೆ, ಎರಡು ಗಂಟೆಗಳ ಸಂಭಾಷಣೆಯ ನಂತರ ಕ್ವಿಕ್ ರೆಸ್ಪಾನ್ಸ್ ಟೀಮ್ (ಕ್ಯೂಆರ್‌ಟಿ) 8 ಕಮಾಂಡೋಗಳೊಂದಿಗೆ 35 ನಿಮಿಷಗಳ ಕಾರ್ಯಾಚರಣೆ ನಡೆಸಿದರು. ಹೈಡ್ರಾಲಿಕ್ ಟೂಲ್‌ಗಳೊಂದಿಗೆ ಸ್ಟುಡಿಯೋದ ಗ್ರಿಲ್‌ಗಳನ್ನು ಕತ್ತರಿಸಿ, ಪೊಲೀಸರು ಒಳಗೆ ನುಗ್ಗಿ ಮಕ್ಕಳನ್ನು ರಕ್ಷಿಸಿದರು. ಈ ವೇಳೆ ಆರ್ಯ ಗುಂಡು ಹಾರಿಸಿದ್ದರಿಂದ ಪೊಲೀಸ್ ಪ್ರತಿದಾಳಿ ನೀಡಿ ಅವರಿಗೆ ಬುಲೆಟ್ ಗಾಯ ಉಂಟುಮಾಡಿದರು. ಆಸ್ಪತ್ರೆಗೆ ಒಯ್ಯಿಸಲ್ಪಟ್ಟ ಆರ್ಯ ಸಾಯಲು ಗೊತ್ತಾಗಿದ್ದು, ಇದೀಗ ಕ್ರೈಮ್ ಬ್ರಾಂಚ್ ತನಿಖೆ ನಡೆಸುತ್ತಿದೆ.

ಆರ್ಯ ಪುಣೆಯವರಾಗಿದ್ದು, ಮಹಾರಾಷ್ಟ್ರ ಶಿಕ್ಷಣ ಇಲಾಖೆಯ ಸ್ಕೂಲ್ ಯೋಜನೆಗಳಲ್ಲಿ ಕಾಂಟ್ರಾಕ್ಟ್ ಪಡೆದು ರೂ. 2 ಕೋಟಿ ಬಿಲ್ ಸ್ಥಗಿತಗೊಳಿಸಲಾಗಿತ್ತು ಎಂದು ಹಿರಿಯ ಮಂತ್ರಿ ದೀಪಕ್ ಕೇಸರ್ಕರ್ ಹೇಳಿದ್ದಾರೆ. ಇದಕ್ಕೆ ವಿರೋಧಿಸಿ ಆರ್ಯ ಆಂಶಿಕ ಹರತಾಲು ನಡೆಸಿದ್ದರು. ಈ ಸಮಸ್ಯೆಯಿಂದ ಮಾನಸಿಕ ಒತ್ತಡಕ್ಕೆ ಒಳಗಾಗಿ ಈ ಕೃತ್ಯಕ್ಕೆ ಶರಣಾಗಿದ್ದರು ಎಂದು ಪೊಲೀಸ್ ತಿಳಿಸಿದ್ದಾರೆ.

ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಅವರು ಈ ಘಟನೆಯನ್ನು 'ಅಸಾಮಾನ್ಯ ಮತ್ತು ಆತಂಕಕಾರಿ' ಎಂದು ಕರೆದು, ತನಿಖೆಯನ್ನು ಖಚಿತಪಡಿಸಿದ್ದಾರೆ. ಕಾಂಗ್ರೆಸ್ ನಾಯಕ ವಿಜಯ್ ವಡೇಟ್ಟಿವಾರ್ ಅವರು ಸರ್ಕಾರದ ಹಣಕಾಸು ನಿರ್ಲಕ್ಷ್ಯವನ್ನು ಟೀಕಿಸಿದ್ದಾರೆ.

ಈ ಘಟನೆಯು ಯಾಮಿ ಗೌತಮ್ ಅಭಿನಯದ 'ಎ ಥರ್ಸ್‌ಡೇ' ಚಿತ್ರದಂತೆ ತೋರುತ್ತಿದ್ದು, ಗುರುವಾರ ನಡೆದಿದ್ದು ಇದಕ್ಕೆ ಹೆಚ್ಚಿನ ಕುತೂಹಲ ಸೃಷ್ಟಿಸಿದೆ. ಮಕ್ಕಳ ಆರೋಗ್ಯ ಪರೀಕ್ಷೆಯ ನಂತರ ಅವರನ್ನು ತಲುಪುಗಳಿಗೆ

## ಸುಶಾಂತ್ ಆತ್ಮಹತ್ಯೆ ಮಾಡಿಕೊಂಡಿಲ್ಲ, ಸಹೋದರಿ ಶ್ವೇತಾಸಿಂಗ್ ಗಂಭೀರ ಆರೋಪ



**ನವದೆಹಲಿ**: ಬಾಲಿವುಡ್ ನಟ ಸುಶಾಂತ್ ಸಿಂಗ್ ರಜಪೂತ್ ಅವರ ಸಾವು ಮತ್ತೆ ಚರ್ಚೆಗೆ ಗ್ರಾಸವಾಗಿದೆ. ಸುಶಾಂತ್ ಆತ್ಮಹತ್ಯೆ ಮಾಡಿಕೊಂಡಿಲ್ಲ, ಅವರನ್ನು ಇಬ್ಬರು ವ್ಯಕ್ತಿಗಳು ಕೊಂದಿದ್ದಾರೆ ಎಂದು ಸುಶಾಂತ್ ಸಹೋದರಿ ಶ್ವೇತಾಸಿಂಗ್ ಹೇಳಿದ್ದಾರೆ.

ಖಾಸಗಿ ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ಅಮೆರಿಕ ಮತ್ತು ಮುಂಬೈನ ಇಬ್ಬರು ಮನಶಾಸ್ತ್ರಜ್ಞರು ನನ್ನನ್ನು ಸಂಪರ್ಕಿಸಿ, ಸುಶಾಂತ್ ಅವರ ಸಾವಿನ ಹಿಂದೆ ಸಂಚು ಇದೆ ಎಂದು ಹೇಳಿದ್ದಾರೆ. ಅವನು ಆತ್ಮಹತ್ಯೆ ಮಾಡಿಕೊಂಡಿಲ್ಲ ಎನ್ನುವುದಕ್ಕೆ ಹಲವು ಸಾಕ್ಷ್ಯಗಳಿವೆ. ಅವನು ನೇಣು ಹಾಕಿಕೊಳ್ಳಲು ಫ್ಯಾನ್ ಮತ್ತು ಹಾಸಿಗೆಯ ಮಧ್ಯೆ ಅಷ್ಟು ಅಂತರವೇ ಇರಲಿಲ್ಲ. ಅಲ್ಲಿ ಸ್ಟೂಲ್ ಕೂಡ ಇರಲಿಲ್ಲ. ಹಾಗಾದರೆ ಆತ್ಮಹತ್ಯೆ ಮಾಡಿಕೊಳ್ಳಲು ಹೇಗೆ ಸಾಧ್ಯ? ಎಂದು ಪ್ರಶ್ನಿಸಿದ್ದಾರೆ ಇನ್ನೂ ಸುಶಾಂತ್ ಕುತ್ತಿಗೆಯ ಮೇಲಿದ್ದ ಗುರುತುಗಳು ಬಟ್ಟೆಯಿಂದ ಮೂಡಿದಂತಿರಲಿಲ್ಲ, ಬದಲಾಗಿ ಸರಪಳಿಯಂತಿದ್ದವು. ಈ ಒಂದು ಸಾಕ್ಷಿಯಿಂದಲೇ ಅವನು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂಬುವುದನ್ನು ನಾನು ನಂಬಲಿಲ್ಲ. ನನ್ನನ್ನು ಸಂಪರ್ಕಿಸಿದ ಇಬ್ಬರು ಮನಶ್ಯಾಸ್ತ್ರಜ್ಞರು ಕೂಡ ಸುಶಾಂತ್‌ಗೆ ಪರಿಚಯವಿರಲಿಲ್ಲ. ಆದರೆ ಇಬ್ಬರೂ ಹೇಳಿದ್ದು ಒಂದೇ ಸುಶಾಂತ್‌ನ್ನು ಇಬ್ಬರು ವ್ಯಕ್ತಿಗಳು ಕೊಂದಿದ್ದಾರೆ ಎಂದು ತಿಳಿಸಿದ್ದಾರೆ.

ಸುಶಾಂತ್ ಅನ್ನು ಭಾವನಾತ್ಮಕವಾಗಿ ಮತ್ತು ಮಾನಸಿಕವಾಗಿ ಕುಗ್ಗಿಸಲು ಪ್ರಯತ್ನ ಮಾಡಲಾಗಿದೆ. ನನ್ನ ಸಹೋದರ ಎಲ್ಲ ವಿಷಯದಲ್ಲಿಯೂ ಮುಂದೆ ಇದ್ದ. ಬಾಲಿವುಡ್‌ನಲ್ಲಿಯೂ ವೇಗವಾಗಿ ಎತ್ತರಕ್ಕೆ ಬೆಳೆದ. ಅದನ್ನು ಎಲ್ಲರಿಗೂ ಸಹಿಸಲಾಗಲಿಲ್ಲ, ಹೀಗಾಗಿ ಇದೆಲ್ಲವನ್ನು ನಿಲ್ಲಿಸಲು ಯಾರೋ ಸಂಚು ರೂಪಿಸಿದ್ದರು ಎಂದಿದ್ದಾರೆ.

ಇತ್ತೀಚಿಗೆ ನಟ ಸುಶಾಂತ್ ಸಿಂಗ್ ರಜಪೂತ್ ಆತ್ಮಹತ್ಯೆ ಕೇಸಲ್ಲಿ ಗೆಳತಿ-ನಟಿ ರಿಯಾ ಚಕ್ರವರ್ತಿಗೆ ಸಿಬಿಐ ಕ್ಲೀನ್‌ಚಿಟ್ ಕೊಟ್ಟಿತ್ತು. 6 ದಿನಗಳ ಮೊದಲೇ ರಿಯಾ ಅಪಾರ್ಟ್ಮೆಂಟ್‌ನಿಂದ ಹೊರಟಿದ್ದರು. ಹಣಕಾಸಿನ ಯಾವುದೇ ಅವ್ಯವಹಾರ ನಡೆದಿಲ್ಲ. ಆತ್ಮಹತ್ಯೆಗೆ ಪ್ರಚೋದಿಸುವಂತದ್ದು ಏನೂ ನಡೆದಿಲ್ಲ ಎಂದು ಸಿಬಿಐ ವರದಿಯಲ್ಲಿ ತಿಳಿಸಿತ್ತು

## ಕಳ್ಳ ಕಾಕರ ಅಡ್ಡೆಯಾದ ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್ ಹೈವೇ



**ರಾಮನಗರ**: ಬೆಂಗಳೂರು-ಮೈಸೂರು ನಡುವಿನ ಪ್ರಯಾಣದ ಸಮಯವನ್ನು ಕಡಿಮೆಗೊಳಿಸುವ ಮತ್ತು ಸುಗಮ ಸಂಚಾರದ ಉದ್ದೇಶದಿಂದ ನಿರ್ಮಿಸಲಾಗಿರುವ ಎಕ್ಸ್‌ಪ್ರೆಸ್ ವೇ ಸದಾ ಒಂದಿಲ್ಲೊಂದು ವಿಚಾರಗಳಿಗೆ ಆರಂಭದಿಂದಲೂ ಸುದ್ದಿಯಾಗುತ್ತಲೇ ಇದೆ. 118 ಕಿ.ಮೀ ಉದ್ದ ಮತ್ತು 6 ಪಥದ ಹೆದ್ದಾರಿಯಲ್ಲಿ ಮೇಲಿಂದ ಮೇಲೆ ಅಪಘಾತಗಳು ನಡೆಯುತ್ತಿರುವ ಸುದ್ದಿಯ ನಡುವೆ ಅಪರಾಧಗಳೂ ಹೆಚ್ಚಿರೋದು ವಾಹನ ಸವಾರರ ಆತಂಕಕ್ಕೆ ಕಾರಣವಾಗಿದೆ.

ಒಟ್ಟು 8,479 ಕೋಟಿ ರೂ. ವೆಚ್ಚದಲ್ಲಿ ಕರ್ನಾಟಕದ ಮೊದಲ ಎಕ್ಸ್‌ಪ್ರೆಸ್ ಹೈವೇ ನಿರ್ಮಾಣವಾಗಿದ್ದು, ಇದನ್ನು ಎರಡೂವರೆ ವರ್ಷಗಳ ಹಿಂದೆ ಮಂಡ್ಯ ತಾಲೂಕಿನ ಹನಕೆರೆ ಗ್ರಾಮದ ಬಳಿ ಪ್ರಧಾನಿ ಮೋದಿ ಉದ್ಘಾಟಿಸಿದ್ದರು. ಈ ರಸ್ತೆಯೀಗ ಕಳ್ಳರ ಹಾಟ್ ಸ್ಪಾಟ್ ಆಗಿ ಮಾರ್ಪಟ್ಟಿದೆ. ಸರ್ವೀಸ್ ರಸ್ತೆಯಲ್ಲಿ ದರೋಡೆ, ಕಳ್ಳತನ ಪ್ರಕರಗಳು ಮೇಲಿಂದ ಮೇಲೆ ನಡೆಯುತ್ತಲೇ ಇವೆ. ರಾತ್ರಿ ವೇಳೆ ಬೈಕ್‌ನಲ್ಲಿ ಬರುವ, ಹೆದ್ದಾರಿ ಪಕ್ಕದಲ್ಲಿ ವಾಹನ ನಿಲ್ಲಿಸಿ ನಿದ್ರೆ ಮಾಡುವವರನ್ನೇ ಟಾರ್ಗೆಟ್ ಮಾಡಿ ಕಳ್ಳತನ, ದರೋಡೆ ಮಾಡುವ ಕೆಲಸಗಳು ವರದಿಯಾಗಿವೆ. ಇತ್ತೀಚೆಗೆ ತಮಿಳುನಾಡು ಪೊಲೀಸರನ್ನೇ ಇಲ್ಲಿ ಕಳ್ಳರು ದೋಚಿದ್ದಾರೆ ಎಂಬುದು ಸ್ಥಳೀಯರ ಆರೋಪ. ಅವೈಜ್ಞಾನಿಕ ಕಾಮಗಾರಿಯಿಂದ ಸಮಸ್ಯೆ

ಅಲ್ಲದೆ ರಸ್ತೆ ಉದ್ಘಾಟನೆಗೊಂಡು ಎರಡೂವರೆ ವರ್ಷಗಳು ಕಳೆದರೂ ಹೆದ್ದಾರಿಯ ಸರ್ವೀಸ್ ರಸ್ತೆಯ ಕಾಮಗಾರಿ ಇನ್ನೂ ಪೂರ್ಣಗೊಂಡಿಲ್ಲ. ನಡೆದಿರುವ ಕಾಮಗಾರಿಯೂ ಅವೈಜ್ಞಾನಿಕವಾಗಿದೆ. ಪ್ರಯಾಣಿಕರ ಸುರಕ್ಷತೆ ದೃಷ್ಟಿಯಿಂದ ಇರಬೇಕಿದ್ದ ಸಿಸಿ ಕ್ಯಾಮರಾಗಳನ್ನು ಕೂಡ ಅಳವಡಿಸಲಾಗಿಲ್ಲ. ಬೀದಿ ದೀಪಗಳು ಇಲ್ಲದಿರುವ ಜೊತೆಗೆ, ಪೊಲೀಸರ ಗಸ್ತು ಕೂಡ ಇಲ್ಲದೇ ಇರುವುದು ಕಳ್ಳರಿಗೆ ವರದಾನವಾಗಿದೆ. ಇದನ್ನೇ ಬಂಡವಾಳಮಾಡಿಕೊಂಡು ಪ್ರಯಾಣಿಕರ ಸುಲಿಗೆ ಮಾಡಲಾಗುತ್ತಿದೆ ಎಂದು ಸಾರ್ವಜನಿಕರು ಆರೋಪಿಸಿದ್ದಾರೆ.

**ನವೆಂಬರ್ 27 ರಂದು ನಿಮ್ಮ ಡಿಜಿಟಲ್ ವಾರ್ತೆ ದಿನಪತ್ರಿಕೆ ಹಾಗೂ ಡಿಜಿಟಲ್ ವಾಹಿನಿ ನೂತನ ಕಚೇರಿ ಉದ್ಘಾಟನೆಗೊಳ್ಳಲಿದ್ದು, ಸರ್ವರಿಗೂ ಆತ್ಮೀಯ ಆಮಂತ್ರಣ**

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಹಿಂದೂ ಮುಖಂಡ ಶರಣ್ ಪಂಪ್‌ವೆಲ್ ಪೊಲೀಸ್ ವಶಕ್ಕೆ



ಮಂಗಳೂರು: ಫೇಸ್ ಬುಕ್‌ನಲ್ಲಿ ಪ್ರಚೋದನಕಾರಿ ಪೋಸ್ಟ್ ಶೇರ್ ಮಾಡಿದ ಆರೋಪದಲ್ಲಿ ಹಿಂದೂ ಮುಖಂಡ, ವಿಹೆಚ್‌ಪಿ ಪ್ರಾಂತ ಸಹ ಕಾರ್ಯದರ್ಶಿ ಶರಣ್ ಪಂಪ್‌ವೆಲ್ (Sharan Pumpwell) ಅವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಆರ್‌ಎಸ್‌ಎಸ್ ಮುಖಂಡರೊಬ್ಬರ ಭಾಷಣದ ವಿಡಿಯೋ ಶೇರ್ ಮಾಡಿದ್ದ ಆರೋಪದಲ್ಲಿ ಪಂಪ್‌ವೆಲ್ ವಿರುದ್ಧ ಎಫ್‌ಐಆರ್ ದಾಖಲಿಸಿರುವ ಮಂಗಳೂರಿನ ಕದ್ರಿ ಠಾಣೆ ಪೊಲೀಸರು ವಶಕ್ಕೆ ಪಡೆದಿದ್ದಾರೆ. ಕದ್ರಿ ಠಾಣೆಯ ನಾಗರಾಜ್ ಭರ್ಜರಿ ದೂರಿನ ಆಧಾರದಲ್ಲಿ ಎಫ್‌ಐಆರ್ ದಾಖಲಾಗಿತ್ತು.

ಬೆಳವಣಿಗೆ ಬೆನ್ನಲ್ಲೇ ಕದ್ರಿ ಪೊಲೀಸ್ ಠಾಣೆಗೆ ಬಿಜೆಪಿ ಶಾಸಕ ವೇದವ್ಯಾಸ ಕಾಮತ್, ಬಿಜೆಪಿ ಜಿಲ್ಲಾಧ್ಯಕ್ಷ ಸತೀಶ್ ಕುಂಪಲ ಭೇಟಿ ನೀಡಿ ವಿಚಾರಿಸಿದ್ದಾರೆ. ಪೊಲೀಸ್ ಠಾಣೆಯ ಬಳಿ ಹಿಂದೂ ಸಂಘಟನೆಯ ಕಾರ್ಯಕರ್ತರು ಜಮಾಯಿಸಿದ್ದಾರೆ. ಯಾವುದೇ ನೋಟಿಸ್ ನೀಡದೇ ಕರೆದುಕೊಂಡು ಹೋದ ಆರೋಪ ವ್ಯಕ್ತವಾಗಿದೆ. ಸದ್ಯ ಪೊಲೀಸ್ ಅಧಿಕಾರಿಗಳ ಜೊತೆ ಶಾಸಕರು, ನಾಯಕರು ಮಾತುಕತೆ ನಡೆಸಿದ್ದಾರೆ.

ಬಿಜೆಪಿ ಮುಖಂಡ ವಿಕಾಸ್ ಪುತ್ತೂರು ಎಂಬವರು ಆರ್‌ಎಸ್‌ಎಸ್ ಮುಖಂಡರ ಭಾಷಣದ ತುಣುಕು ಶೇರ್ ಮಾಡಿದ್ದರು. ಕಳೆದ ಎರಡು ವರ್ಷಗಳ ಹಿಂದೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಮಕ್ಕಳು ಹುಟ್ಟಿದರು ಎಂಬ ಬಗ್ಗೆ ಆರ್‌ಎಸ್‌ಎಸ್ ಮುಖಂಡ ಭಾಷಣ ಮಾಡಿದ್ದರು. ಮುಸ್ಲಿಮರ ಜನಸಂಖ್ಯೆ ಜಿಹಾದ್ ಮೆಟ್ಟಿ ನಿಲ್ಲೋಣ ಎಂಬ ವಾಕ್ಯದೊಂದಿಗೆ ಭಾಷಣದ ತುಣುಕನ್ನು ವಿಕಾಸ್ ಪುತ್ತೂರು ಶೇರ್ ಮಾಡಿದ್ದರು. ಅದೇ ಪೋಸ್ಟನ್ನು ಶರಣ್ ಪಂಪ್‌ವೆಲ್ ಹಂಚಿಕೊಂಡಿದ್ದರು.

ಸದ್ಯ ಎ1 ಆರೋಪಿ ವಿಕಾಸ್ ಪುತ್ತೂರು, ಎ2 ಆರೋಪಿ ಶರಣ್ ಪಂಪ್‌ವೆಲ್ ವಿರುದ್ಧ ಬಿಎನ್‌ಎಸ್ 353 (2), ಅಡಿ ಎಫ್‌ಐಆರ್ ದಾಖಲಾಗಿದೆ.

ಕದ್ರಿ ಪೊಲೀಸ್ ಠಾಣೆ ಮುಂಭಾಗ ಶರಣ್ ಪಂಪ್‌ವೆಲ್ ಆಕ್ರೋಶ ಹೊರಹಾಕಿದ್ದಾರೆ. ಸಾಮಾಜಿಕ ಮುಖಂಡನಾಗಿ ಸಮಾಜದ ಆಗುಹೋಗುಗಳ ಬಗ್ಗೆ ಪ್ರತಿಕ್ರಿಯೆ ನೀಡಿದ್ದೆ. ಆದರೆ, ನೋಟಿಸ್ ಕೊಟ್ಟು ಅರೆಸ್ಟ್ ಮಾಡುವ ಬದಲು ಬೇರೆ ಬೇರೆ ವರ್ತನೆ ತೋರಿದ್ದಾರೆ. ಈಗ ನೋಟಿಸ್ ಕೊಟ್ಟು ಡಿಸಿಪಿ ಮುಂದೆ ಹಾಜರುಪಡಿಸಲು ಕರೆದುಕೊಂಡು ಹೋಗುತ್ತಿದ್ದಾರೆ.

ಆದರೆ, ಯಾವುದೇ ನೋಟಿಸ್ ನೀಡದೆ ಬಂಧನ ಮಾಡುವ ಪ್ರಯತ್ನ ಮಾಡಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಜನಸಂಖ್ಯೆ ಸಂಬಂಧ ಮಾಡಿದ ಪೋಸ್ಟ್‌ಗೆ ಬಂಧನ ಮಾಡಲು ಮುಂದಾಗಿದ್ದರು. ಅಭಿವ್ಯಕ್ತಿ ಸ್ವಾತಂತ್ರ್ಯ ಕಿತ್ತುಕೊಳ್ಳುವ ಪ್ರಯತ್ನಕ್ಕೆ ಸರ್ಕಾರ ಮುಂದಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

# ರಾಜ್ಯಪಾಲ ಗೆಹ್ಲೋಟ್ ಆಸ್ಪತ್ರೆಗೆ ದಾಖಲು ಆರೋಗ್ಯ ವಿಚಾರಿಸಿದ ಸಿಎಂ ಸಿದ್ದರಾಮಯ್ಯ



**ಬೆಂಗಳೂರು:** ಕರ್ನಾಟಕ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ತೀವ್ರ ಜ್ವರದಿಂದ ಬಳಲುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರಿನ ಮಣಿಪಾಲ್ ಆಸ್ಪತ್ರೆಗೆ ದಾಖಲಾಗಿದ್ದಾರೆ. ಕಳೆದ ಎರಡು ದಿನಗಳಿಂದ ಅವರು ವೈರಲ್ ಜ್ವರದಿಂದಾಗಿ ಅಸ್ವಸ್ಥರಾಗಿದ್ದು, ವೈದ್ಯರು ಚಿಕಿತ್ಸೆ ನೀಡುತ್ತಿದ್ದಾರೆ. ಅಧಿಕೃತ ಮೂಲಗಳ ಪ್ರಕಾರ, ರಾಜ್ಯಪಾಲರ ಆರೋಗ್ಯದಲ್ಲಿ ಸುಧಾರಣೆ ಕಂಡುಬಂದಿದ್ದು, ಅವರು ಇಂದು ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗುವ ಸಾಧ್ಯತೆ ಇದೆ.

ರಾಜ್ಯಪಾಲರ ಅಸ್ವಸ್ಥತೆಯ ಸುದ್ದಿ ತಿಳಿದ ಕೂಡಲೇ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿ ಅವರ ಆರೋಗ್ಯ ವಿಚಾರಿಸಿದರು. ಸಿಎಂ ಅವರು ವೈದ್ಯರಿಂದ ಚಿಕಿತ್ಸೆ ಕುರಿತು ಮಾಹಿತಿ ಪಡೆದು, ರಾಜ್ಯಪಾಲರು ಬೇಗ ಗುಣಮುಖರಾಗಲೆಂದು ಹಾರೈಸಿದರು.

ಟ್ವೀಟ್ ಮೂಲಕ ತಮ್ಮ ಭೇಟಿಯ ಕುರಿತು ಮಾಹಿತಿ ನೀಡಿರುವ ಸಿಎಂ ಸಿದ್ದರಾಮಯ್ಯ, "ಇಂದು ಮಣಿಪಾಲ್ ಆಸ್ಪತ್ರೆಗೆ ಭೇಟಿ ನೀಡಿ, ಚಿಕಿತ್ಸೆ ಪಡೆಯುತ್ತಿರುವ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರ ಆರೋಗ್ಯ ವಿಚಾರಿಸಿ ಬೇಗ ಗುಣಮುಖರಾಗುವಂತೆ ಹಾರೈಸಿದೆ" ಎಂದು ಹೇಳಿದ್ದಾರೆ.

ಮೂಲಗಳ ಪ್ರಕಾರ, ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಇತ್ತೀಚೆಗೆ ಮಧ್ಯಪ್ರದೇಶಕ್ಕೆ ಅಧಿಕೃತ ಪ್ರವಾಸ ಕೈಗೊಂಡಿದ್ದರು. ಅವರು ಅಲ್ಲಿ ಹಲವು ಸಾರ್ವಜನಿಕ ಹಾಗೂ ಅಧಿಕೃತ ಕಾರ್ಯಕ್ರಮಗಳಲ್ಲಿ ಭಾಗವಹಿಸಿದ್ದರು. ಸತತ ಪ್ರಯಾಣ ಹಾಗೂ ಅಧಿಕೃತ ಸಭೆಗಳ ಕಾರಣದಿಂದ ಆಯಾಸ ಮತ್ತು ಹವಾಮಾನ ಬದಲಾವಣೆ ಹಿನ್ನೆಲೆ ಜ್ವರ ತಗುಲಿರಬಹುದು ಎಂದು ವೈದ್ಯರು ತಿಳಿಸಿದ್ದಾರೆ.

ಮೊದಲಿಗೆ ರಾಜ್ಯಪಾಲರನ್ನು ಬೆಂಗಳೂರಿನ ಏರ್‌ಪೋರ್ಟ್ ರಸ್ತೆಯಲ್ಲಿರುವ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ನಂತರ, ಹೆಚ್ಚಿನ ವೈದ್ಯಕೀಯ ತಪಾಸಣೆ ಮತ್ತು ನಿಗಾ ಚಿಕಿತ್ಸೆಗೆ ಅವರನ್ನು ಮಣಿಪಾಲ್ ಆಸ್ಪತ್ರೆಗೆ ವರ್ಗಾಯಿಸಲಾಯಿತು.

ಮಣಿಪಾಲ್ ಆಸ್ಪತ್ರೆಯ ವೈದ್ಯರು, "ರಾಜ್ಯಪಾಲರ ಆರೋಗ್ಯ ಸ್ಥಿತಿ ಸ್ಥಿರವಾಗಿದೆ. ಅವರಿಗೆ ವೈರಲ್ ಇನ್ಫೆಕ್ಷನ್ ಕಾರಣದಿಂದ ಜ್ವರ ಬಂದಿದೆ. ಪ್ರಸ್ತುತ ವೈದ್ಯಕೀಯ ತಂಡದಿಂದ ಅಗತ್ಯ ಚಿಕಿತ್ಸೆ ನೀಡಲಾಗುತ್ತಿದೆ ಮತ್ತು ಅವರು ಚೇತರಿಸಿಕೊಳ್ಳುತ್ತಿದ್ದಾರೆ. ನಾಳೆ ಮುಂಜಾನೆ ಅವರನ್ನು ಡಿಸ್ಚಾರ್ಜ್ ಮಾಡುವ ಸಾಧ್ಯತೆ ಇದೆ" ಎಂದು ತಿಳಿಸಿದ್ದಾರೆ.

ರಾಜ್ಯಪಾಲರ ಅಸ್ವಸ್ಥತೆಯ ಸುದ್ದಿ ಹೊರಬಂದ ನಂತರ, ರಾಜ್ಯದ ಹಲವು ರಾಜಕೀಯ ನಾಯಕರು ಹಾಗೂ ಗಣ್ಯರು ಅವರ ಆರೋಗ್ಯದ ಬಗ್ಗೆ ಕಾಳಜಿ ವ್ಯಕ್ತಪಡಿಸಿದ್ದಾರೆ. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೇರಿದಂತೆ ಹಲವರು ಸಾಮಾಜಿಕ ಜಾಲತಾಣಗಳ ಮೂಲಕ "ಗೆಹ್ಲೋಟ್ ಅವರು ಬೇಗ ಚೇತರಿಸಿಕೊಳ್ಳಲಿ" ಎಂದು ಟ್ವೀಟ್ ಮಾಡಿದ್ದಾರೆ.

# ಬಿಜೆಪಿಯ ಆಂತರಿಕ ಕಲಹವೇ ಧರ್ಮಸ್ಥಳ ಪ್ರಕರಣಕ್ಕೆ ಕಾರಣ: ಡಿ.ಕೆ ಶಿವಕುಮಾರ್



**ಬೆಂಗಳೂರು**: "ಧರ್ಮಸ್ಥಳ ಪ್ರಕರಣಕ್ಕೆ ಬಿಜೆಪಿ ನಾಯಕರ ಆಂತರಿಕ ಕಲಹವೇ ಕಾರಣ ಎನ್ನುವ ಹೇಳಿಕೆಗೆ ನಾನು ಈಗಲೂ ಬದ್ಧನಾಗಿದ್ದೇನೆ. ಅದಕ್ಕೆ ಸಂಬಂಧಪಟ್ಟಂತೆ ಹೇಳಿಕೆಗಳು, ಮಾತುಗಳು ನಿಮ್ಮ (ಮಾಧ್ಯಮಗಳ) ಮುಂದಿವೆ" ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಹೇಳಿದರು.

ಧರ್ಮಸ್ಥಳ ಪ್ರಕರಣ ರದ್ದು ಕೋರಿ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಕೆ ಕುರಿತು ಕೇಳಿದಾಗ ಉತ್ತರಿಸಿದ ಶಿವಕುಮಾರ್ ಅವರು, "ಧರ್ಮಸ್ಥಳ ಪ್ರಕರಣ ವಿಚಾರದಲ್ಲಿ ವ್ಯಕ್ತಿ, ಕುಟುಂಬ ಮತ್ತು ಸಂಸ್ಥೆಗೆ ಎಷ್ಟು ಹಾನಿ ಮಾಡಬೇಕೋ ಅದನ್ನು ಈಗಾಗಲೇ ಮಾಡಲಾಗಿದೆ. ಒಟ್ಟಿನಲ್ಲಿ ಧರ್ಮ ಮತ್ತು ನ್ಯಾಯ ಉಳಿಯಬೇಕು ಎಂಬುದು ನಮ್ಮ ಅಭಿಲಾಷೆ" ಎಂದರು.

**ಮಾತು ಬಿಡದ ಮಂಜುನಾಥ, ಕಾಸು ಬಿಡದ ತಿಮ್ಮಪ್ಪ**

"ವೀರೇಂದ್ರ ಹೆಗ್ಗಡೆಯವರ ವ್ಯಕ್ತಿತ್ವವೇ ಬೇರೆ. ಆ ಸಂಸ್ಥೆಯ ಹೆಸರಿಗೆ ಹಾನಿಯಾಗುತ್ತಿದೆಯಲ್ಲ ಎಂದು ಬೇಸರವಾಗಿತ್ತು. "ಮಾತು ಬಿಡದ ಮಂಜುನಾಥ, ಕಾಸು ಬಿಡದ ತಿಮ್ಮಪ್ಪ". ತಿರುಪತಿಯಲ್ಲಿ ಕಾಸಿನ ಹರಕೆ, ಧರ್ಮಸ್ಥಳದಲ್ಲಿ ಮಾತಿನ ಹರಕೆ ಕಟ್ಟಿಕೊಂಡರೆ ಬಿಡುವಂತಿಲ್ಲ. ಇಂತಹ ಪದ್ಧತಿಯಲ್ಲಿ ನಡೆದುಕೊಂಡು ಹೋಗುವ ಕಡೆ ಯಾವುದೇ ಸಮಸ್ಯೆ ಇಲ್ಲ ಎಂಬುದು ನನ್ನ ನಂಬಿಕೆ" ಎಂದರು.

"ನನ್ನ ವೈಯಕ್ತಿಕ ಮಾಹಿತಿ ಪ್ರಕಾರ ಹಾಗೂ ಧರ್ಮಸ್ಥಳದಲ್ಲಿ ಯಾವ ಪದ್ಧತಿ ನಡೆಯುತ್ತಿದೆ, ಅಲ್ಲಿ ಯಾವ ಸಂಪ್ರದಾಯಗಳನ್ನು ಆಚರಿಸಲಾಗುತ್ತಿದೆ ಎನ್ನುವ ಬಗ್ಗೆ ನನ್ನ ಅನುಭವದ ಆಧಾರದಲ್ಲಿ ಮಾತನಾಡಿದ್ದೇನೆ" ಎಂದರು. ಎಸ್ ಐಟಿ ವರದಿಯಲ್ಲಿ ಏನಿದೆ ಎಂದು ತಿಳಿದಿಲ್ಲ

"ಧರ್ಮಸ್ಥಳ ಪ್ರಕರಣದ ಕುರಿತಾಗಿ ಎಸ್ ಐಟಿ ಸರ್ಕಾರಕ್ಕೆ ವರದಿ ಸಲ್ಲಿಸಿದೆಯೇ, ಇಲ್ಲವೇ ಎನ್ನುವ ಬಗ್ಗೆ ನನಗೆ ಮಾಹಿತಿಯಿಲ್ಲ. ವರದಿಯನ್ನು ಶೀಘ್ರದಲ್ಲೇ ನೀಡಬೇಕು ಎಂದು ಗೃಹಸಚಿವರು ಹೇಳಿರುವ ಹೇಳಿಕೆಯನ್ನು ಗಮನಿಸಿದ್ದೇನೆ. ಎಸ್ ಐಟಿ ವರದಿ ಬಂದ ನಂತರ ಏನಿದೆ ಎಂಬುದನ್ನು ಗಮನಿಸೋಣ. ಅದರಲ್ಲಿ ಏನಿದೆ ಎಂಬುದು ನನಗೆ ತಿಳಿದಿಲ್ಲ. ಮಾಧ್ಯಮಗಳಲ್ಲಿ ಬಂದಷ್ಟು ಮಾಹಿತಿ ಮಾತ್ರ ನನಗೆ ತಿಳಿದಿದೆ. ನಾನು ಯಾವ ಅಧಿಕಾರಿಯ ಬಳಿಯೂ ಯಾವುದೇ ವರದಿ ಕೇಳಲು, ಮಾತನಾಡಲು ಹೋಗಿಲ್ಲ" ಎಂದರು.

"ಅವರು ಸಾವಿರಾರು ಅರ್ಜಿಗಳನ್ನು ನ್ಯಾಯಲಯಕ್ಕೆ ಹಾಕಿಕೊಂಡಿರಬಹುದು. ನಾನು, ನೀವು ಅಥವಾ ಬೇರೆಯವರು ಏನಾದರೂ ಅಪರಾಧ ಮಾಡಿದ್ದ ಸಂದರ್ಭದಲ್ಲಿ ತಪ್ಪಾಯಿತು ಎಂದು ಕ್ಷಮಾಪಣೆ ಕೇಳುವ ಅವಕಾಶ ಈ ದೇಶದ ಕಾನೂನಿನಲ್ಲಿ ಇದೆಯೇ ಎಂಬುದರ ಬಗ್ಗೆ ಮಾಧ್ಯಮಗಳು ವಿಮರ್ಶೆ ಮಾಡಬೇಕು" ಎಂದರು.

**ನನ್ನ ಹಾಗೂ ಶಾಸಕರ ಬಗ್ಗೆಯೂ ಸಮೀಕ್ಷೆ ನಡೆಯುತ್ತದೆ**

ಸಚಿವ ಸಂಪುಟ ಪುನಾರಚನೆ ಸಂಬಂಧ ಹೈಕಮಾಂಡ್ ಗೆ ಸಚಿವರು ಮೂರು ತಿಂಗಳ ವರದಿ ನೀಡಿದ್ದಾರೆ ಎನ್ನುವ ಬಗ್ಗೆ ಕೇಳಿದಾಗ, "ನನಗೆ ಇದರ ಬಗ್ಗೆ ಮಾಹಿತಿಯಿಲ್ಲ. ಬೇರೆ ವಿಚಾರ ಅಥವಾ ಸಚಿವರ ಬಗ್ಗೆ ವರದಿ ಕೇಳಿರುವುದು ನನಗೆ ಗೊತ್ತಿಲ್ಲ. ನನ್ನ ಹಾಗೂ ಶಾಸಕರ ಬಗ್ಗೆ ಪ್ರತಿ ತಿಂಗಳು ನಮ್ಮ ಪಕ್ಷದಲ್ಲಿ ಸಮೀಕ್ಷೆ ನಡೆಯುತ್ತಲೇ ಇರುತ್ತದೆ. ಕ್ಷೇತ್ರ, ಪಕ್ಷ, ಸರ್ಕಾರದಲ್ಲಿ ಏನು ಕೆಲಸ ಮಾಡುತ್ತಿದ್ದಾರೆ, ಹಾಗೂ ಏನೇನು ಚಟುವಟಿಕೆಗಳು ನಡೆಯಿತು ಎಂಬುದರ ಬಗ್ಗೆ ನಿಯಮಿತವಾಗಿ ಹೈಕಮಾಂಡ್ ಗೆ ವರದಿ ಹೋಗುತ್ತಿರುತ್ತದೆ. ಅವರ ಪಾಡಿಗೆ ವರದಿ ತರಿಸಿಕೊಳ್ಳುತ್ತಾರೆ. ನಾವು ಸಹ ಪಕ್ಷದ ಚಟುವಟಿಕೆಗಳು ಏನಿದೆ ಎಂದು ಪ್ರತಿ ತಿಂಗಳೂ ವರದಿ ಕಳುಹಿಸುತ್ತೇವೆ" ಎಂದರು.

# ವಧು-ವರರ ಗೆಟಪ್‌ನಲ್ಲಿ ದರ್ಶನ್, ಪವಿತ್ರಾ ಗೌಡ



ಕೊಲೆ ಆರೋಪಿಗಳಾದ ದರ್ಶನ್ ಹಾಗೂ ಪವಿತ್ರಾರದ್ದು ಎನ್ನಲಾದ ಫೋಟೋಗಳು ಸೋಶಿಯಲ್ ಮೀಡಿಯಾದಲ್ಲಿ ಭಾರಿ ವೈರಲ್ ಆಗಿದೆ. ಇವುಗಳನ್ನು ಪ್ರಾಥಮಿಕವಾಗಿ ಲೀಕ್ ಮಾಡಿದ ಫೋಟೋಗಳು ಎನ್ನಲಾಗುತ್ತಿದ್ದು, ದರ್ಶನ್ ಹಾಗೂ ಪವಿತ್ರಾ ಗೌಡ ಮದುವೆಯದ್ದು ಅನ್ನೋದನ್ನ ಬಿಂಬಿಸಲು ಲೀಕ್ ಮಾಡಿರುವ ಫೋಟೋಗಳಂತೆ ಕಾಣುತ್ತಿದೆ.

ಪವಿತ್ರಾ ಹಾಗೂ ದರ್ಶನ್ ಬಿಳಿಯ ರೇಷ್ಮೆ ವಸ್ತ್ರದಲ್ಲಿ ವಧು-ವರರ ಅವತಾರದಲ್ಲಿದ್ದಾರೆ. ಪವಿತ್ರಾ ಕತ್ತಲ್ಲಿ ಅರಿಶಿಣ ದಾರದ ಮಾಂಗಲ್ಯ ಕಾಣುತ್ತದೆ. ಕೆನ್ನೆಗೆ ಅರಿಶಿಣ ಹಚ್ಚಿದ್ದಾರೆ, ಹಣೆಗೆ ಕುಂಕುಮವಿಟ್ಟಿದ್ದಾರೆ. ದರ್ಶನ್ ಕೂಡ ಹಣೆಗೆ ತಿಲಕವಿಟ್ಟು ಪವಿತ್ರಾ ಜೊತೆ ಅನ್ಯೋನ್ಯವಾಗಿ ಸೆಲ್ಫಿಗೆ ಪೋಸ್ ಕೊಟ್ಟಿದ್ದಾರೆ. 10 ವರ್ಷಗಳ ಹಿಂದಿನ ಫೋಟೋಗಳು ಎನ್ನುವಂತೆ ಕಾಣುತ್ತಿದೆ. ಸದ್ಯಕ್ಕೆ ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ. ಇದನ್ನೂ ಓದಿ: ದರ್ಶನ್ ಕೇಸ್‌ನಲ್ಲಿ ನ.3ಕ್ಕೆ ಚಾರ್ಜ್‌ಫ್ರೇಮ್

ರೇಣುಕಾಸ್ವಾಮಿ ಕೊಲೆ ಆರೋಪಿಗಳಾದ ದರ್ಶನ್ ಹಾಗೂ ಪವಿತ್ರಾ ಪ್ರಕರಣದ ಸಂಬಂಧ ಟ್ರಯಲ್ ಶುರುವಾಗುತ್ತಿರುವ ಈ ಹೊತ್ತಲ್ಲಿ ಸೋಶಿಯಲ್ ಮದುವೆಯದ್ದು ಎನ್ನಲಾದ ಫೋಟೋಗಳನ್ನ ಸೋಶಿಯಲ್ ಮೀಡಿಯಾದಲ್ಲಿ ಲೀಕ್ ಮಾಡಲಾಗಿದೆ. ಇವು ಎಐ ಫೋಟೋಗಳು ಎಂದೂ ಚರ್ಚೆಗಳು ಶುರುವಾಗಿದೆ. ತನಿಖೆಯ ಬಳಿಕವೇ ಸತ್ಯಾಸತ್ಯತೆ ಬಯಲಾಗಬೇಕಿದೆ.

# ಸಮುದ್ರದೊಳಗೆ ಸುನಾಮಿಯನ್ನೇ ಸೃಷ್ಟಿಸಬಲ್ಲ ಅಣುಚಾಲಿತ ಡ್ರೋನ್ ಪರೀಕ್ಷೆ



ಉಕ್ರೇನ್ ಯುದ್ಧದ ನಡುವೆ ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಇತ್ತೀಚಿಗೆ ಯಶಸ್ವಿಯಾಗಿ ಪರೀಕ್ಷಿಸಲಾಗಿದ್ದ 'ಪೊಸೈಡನ್' ಅಣು ಚಾಲಿತ ನೀರಡಿ ಡ್ರೋನ್‌ನ ಬಗ್ಗೆ ಘೋಷಣೆ ನೀಡಿದ್ದಾರೆ. ಇದು ಸಮುದ್ರದಲ್ಲಿ ಸುನಾಮಿ ಸೃಷ್ಟಿಸುವ ಸಾಮರ್ಥ ಹೊಂದಿರುವ ಸೂಪರ್ ಆಯುಧವಾಗಿದ್ದು, ಗಂಟೆಗೆ 130 ಕಿ.ಮೀ. ವೇಗದಲ್ಲಿ ಸಾಗಿ ಯಾವುದೇ ದೇಶದ ಕರಾವಳಿ ನಗರಗಳನ್ನು ನಾಶಮಾಡಬಲ್ಲದು. ಈ ಪರೀಕ್ಷೆಯು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರೊಂದಿಗಿನ ಮಾತುಕತೆಗಳ ನಡುವೆ ಬಂದಿದ್ದು, ಜಗತ್ತಿನಲ್ಲಿ ಹೊಸ ಆತಂಕವನ್ನು ಹುಟ್ಟುಹಾಕಿದೆ.

ಅಕ್ಟೋಬರ್ 29ರಂದು ಮಾಸ್ಕೋದ ಒಂದು ಸೈನ್ಯ ಉಕ್ರೇನ್ ಯುದ್ಧದಲ್ಲಿ ಗಾಯಗೊಂಡ ಸೈನಿಕರನ್ನು ಭೇಟಿಯಾದಾಗ ಪುಟಿನ್ ಅವರು ಹೇಳಿದರು, "ನಾಳೆಯೇ (ಅಕ್ಟೋಬರ್ 28) ನಾವು 'ಪೊಸೈಡನ್' ಡ್ರೋನ್ ಅನ್ನು ಅಣು ಚಾಲಕತೆಯೊಂದಿಗೆ ಪರೀಕ್ಷಿಸಿದ್ದೇವೆ. ಇದು ದೊಡ್ಡ ಯಶಸ್ಸು. ಇದರ ವೇಗ ಮತ್ತು ಆಳಕ್ಕೆ ಸರಿಸಾಟಿಯಿಲ್ಲ, ಯಾರೂ ಭೇದಿಸಲಾರರು." ಈ ಘೋಷಣೆಯು ಅಮೆರಿಕದ 'ಬ್ಯೂರೆವೆಸ್ಟ್ನಿಕ್' ಕ್ಷೇಪಣಿ ಪರೀಕ್ಷೆಯ ಬೆನ್ನಲ್ಲೇ ಬಂದಿದ್ದು, ಟ್ರಂಪ್ ಅವರ "ಉಕ್ರೇನ್ ಯುದ್ಧ ಕೊನೆಗೊಳಿಸಿ, ಶಸ್ತ್ರಾಸ್ತ್ರ ಪರೀಕ್ಷೆ ಬಿಡಿ" ಎಂಬ ಒತ್ತಡಕ್ಕೆ ರಷ್ಯಾದ ಉತ್ತರವೆಂದು ವಿಶ್ಲೇಷಕರು ಹೇಳುತ್ತಿದ್ದಾರೆ.

ಪುಟಿನ್ ಅವರು ಹೇಳಿದಂತೆ, ಈ ಡ್ರೋನ್ ಸಾಂಪ್ರದಾಯಿಕ ಸಬ್‌ಮರೀನ್‌ಗಳಿಗಿಂತ ವೇಗವಾಗಿ ಚಲಿಸಿ, ವಿಶ್ವದ ಯಾವುದೇ ಮೂಲೆಗೆ ತಲುಪಬಲ್ಲದು. "ಭವಿಷ್ಯದಲ್ಲಿ ಯಾರೂ ಇಂತಹ ಆಯುಧವನ್ನು ಅಭಿವೃದ್ಧಿಪಡಿಸಲಾರರು" ಎಂದು ಅವರು ಹೇಳಿದ್ದಾರೆ. 2018ರಲ್ಲಿ ಪುಟಿನ್ ಅವರ ರಾಷ್ಟ್ರೀಯ ಭಾಷಣದಲ್ಲಿ ಪ್ರಸ್ತಾಪಿಸಿದ 6 'ಸೂಪರ್ ಆಯುಧಗಳಲ್ಲಿ' ಪೊಸೈಡನ್ ಒಂದು.

**ಅಮೆರಿಕ-ಉಕ್ರೇನ್ ಸಂದರ್ಭ:**

ಈ ಪರೀಕ್ಷೆಯು ಅಮೆರಿಕ-ರಷ್ಯಾ ಮಾತುಕತೆಗಳ ನಡುವೆ ಬಂದಿದ್ದು, ಉಕ್ರೇನ್ ಯುದ್ಧದಲ್ಲಿ ರಷ್ಯಾದ ದೃಢ ನಿಲುವನ್ನು ತೋರಿಸುತ್ತದೆ. ಟ್ರಂಪ್ ಅವರು "ಶಸ್ತ್ರಾಸ್ತ್ರ ಪರೀಕ್ಷೆ ಬಿಟ್ಟು ಯುದ್ಧ ಕೊನೆಗೊಳಿಸಿ" ಎಂದಿದ್ದರೂ, ಪುಟಿನ್ ಅವರು ಇದನ್ನು ನಿರಾಕರಿಸಿದ್ದಾರೆ. ವಿಶ್ಲೇಷಕರು ಹೇಳುವಂತೆ, ಇದು ಹೊಸ ಶೀತಲ ಸಮರದ ಸಂಕೇತವಾಗಿದ್ದು, ಅಣ್ವಸ್ತ್ರ ನಿರ್ಬಂಧಗಳನ್ನು ಉಲ್ಲಂಘಿಸುವ ಸಾಧ್ಯತೆಯನ್ನು ಹೆಚ್ಚಿಸುತ್ತದೆ.

ಪೊಸೈಡನ್ 2020ರ ಡೆಡ್‌ಲೈನ್ ಮೀರಿದರೂ, 2025ರಲ್ಲಿ ಇದು ಕಾರ್ಯರತನಗೊಳ್ಳುವ ಸಾಧ್ಯತೆಯಿದೆ. ಇದು ರಷ್ಯಾದ ಸೂಪರ್ ಆಯುಧಗಳ ಪೈಲ್‌ನಲ್ಲಿ ಭಾಗವಾಗಿದ್ದು, ಅಮೆರಿಕದ ಮಿಸೈಲ್ ಡಿಫೆನ್ಸ್‌ನ್ನು ಸವಾಲು ಮಾಡುತ್ತದೆ.

# ಮನೆಮುಂದೆಯೇ ಕಸ ಸುರಿದು 2,000 ರೂ. ದಂಡ



ಬೆಂಗಳೂರು: ಎಲ್ಲೆಂದರಲ್ಲಿ ಕಸ ಬಿಸಾಡೋರಿಗೆ ಜಿಬಿಎ (GBA) ತಕ್ಕ ಪಾಠ ಕಲಿಸಲು ಮುಂದಾಗಿದೆ. ಕಸ ಹಾಕಿದವರ ಮನೆ ಮುಂದೆಯೇ ವಾಪಸ್ ಕಸ ಸುರಿದು 2000 ರೂ. ದಂಡ ವಸೂಲಿ ಮಾಡುತ್ತಿದೆ.

ಜಿಬಿಎ ಸಿಬ್ಬಂದಿ ಈಗಾಗಲೇ ಕಸವನ್ನು ಎಲ್ಲೆಂದರಲ್ಲಿ ಬೀಸಾಕಿದ್ದವರ 218 ಮನೆಗಳ ಮುಂದೆ ಕಸವನ್ನು ವಾಪಸ್ ಸುರಿದಿದೆ. ಜೊತೆಗೆ ಒಟ್ಟು 2.8 ಲಕ್ಷ ರೂ. ದಂಡ ವಸೂಲಿ ಮಾಡಿದೆ

ಆರ್‌ಟಿ ನಗರದ (RT Nagar) ಗಂಗಾನಗರದಲ್ಲಿ ಖಾಲಿ ಜಾಗದಲ್ಲಿ ಕಸ ಸುರಿದವರ ಮನೆಯ ಮುಂದೆ ಕಸ ವಾಪಸ್ ಕಸ ಸುರಿಯುತ್ತಿದ್ದು, ಘನತ್ಯಾಜ್ಯ ನಿರ್ವಹಣೆಯ ಸಂಸ್ಥೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಕರಿಗೌಡ ಅವರು ಅಲ್ಲಿನ ನಿವಾಸಿಗಳಿಗೆ ಬುದ್ಧಿವಾದ ಹೇಳಿದ್ದಾರೆ.

ಜಿಬಿಎ ಮಾರ್ಷಲ್‌ಗಳು ಬೆಳ್ಳಂಬೆಳಗ್ಗೆ ಕಸದ ಎಸೆದ ಮಹಿಳೆಯಿಂದಲೇ ಕಸ ಎತ್ತಿಸಿದ್ದಾರೆ. ಬೆಳಿಗ್ಗೆ 5ರ ಸುಮಾರಿಗೆ ಕಸ ಬೀಸಾಡುವ ಜಾಗದಲ್ಲೇ ಮಾರ್ಷಲ್‌ಗಳು ಕಾದು ಕುಳಿತಿದ್ದರು. ಮಹಿಳೆಯ ಬಂದು ಕಸ ಎಸೆಯುತ್ತಿದ್ದಂತೆ ವಿಡಿಯೋ ಮಾಡಿದ್ದಾರೆ. ಇದನ್ನು ಕಂಡ ಮಹಿಳೆ ಬೀಸಾಡಿದ ಕಸವನ್ನು ವಾಪಸ್ ತೆಗೆದುಕೊಂಡು ಹೋಗಿದ್ದಾರೆ

# ಫಿಲ್ಮ್ ಚೇಂಬರ್ ಎಲೆಕ್ಷನ್‌ಗೆ ಮುಹೂರ್ತ ಫಿಕ್ಸ್




ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿಯ) ಡೇಟ್ ಫಿಕ್ಸ್ ಮಾಡಲಾಗಿದೆ ಅನ್ನೋ ಮಾಹಿತಿ ಹೊರಬಿದ್ದಿದೆ. ಪ್ರತಿವರ್ಷದಂತೆ ಈ ವರ್ಷದ ಚುನಾವಣೆಗೆ ದಿನಾಂಕ ನಿಗದಿ ಮಾಡಲಾಗಿದೆಯಂತೆ. ಅ.30 ರಂದು ನಡೆದ ಕಾರ್ಯಕಾರ್ಯಿಣಿ ಸಭೆಯಲ್ಲಿ ಚುನಾವಣೆ ಬಗ್ಗೆ ಪ್ರಸ್ತಾಪಿಸಲಾಗಿದ್ದು, ಚುನಾವಣೆಯನ್ನ ಡಿಸೆಂಬರ್‌ನಲ್ಲಿ ನಡೆಸಲು ತೀರ್ಮಾನ ಮಾಡಲಾಗಿದೆಯಂತೆ ಅಧ್ಯಕ್ಷಸ್ಥಾನ, ಉಪಾಧ್ಯಕ್ಷ ಸ್ಥಾನ, ವಿತರಕ ವಲಯ, ಪ್ರದರ್ಶಕರ ವಲಯ, ಕಾರ್ಯದರ್ಶಿ ಹಾಗೂ ಸದಸ್ಯ ಸ್ಥಾನಕ್ಕೆ ಚುನಾವಣೆ ನಡೆಯಲಿದೆ. ಈ ಬಾರಿ ನಿರ್ಮಾಪಕ ಸಂಘದಿಂದ ಅಧ್ಯಕ್ಷರಾಗಲು ಅವಕಾಶವಿರುವ ಕಾರಣ ಸಾರಾ ಗೋವಿಂದು ಸೇರಿದಂತೆ ಹಲವರು ಸ್ಪರ್ಧೆಗಳಿಯಲು ತಯಾರಿ ಮಾಡಿಕೊಳ್ಳುತ್ತಿದ್ದಾರೆ. ಕಳೆದ ವರ್ಷ ಡಿ.14ರಂದು ಚುನಾವಣೆ ನಡೆದಿತ್ತು. ಪ್ರದರ್ಶಕ ವಲಯದಿಂದ ಅಧ್ಯಕ್ಷರಾಗಿ ಎಂ.ನರಸಿಂಹಲು ಆಯ್ಕೆ ಆಗಿದ್ದರು. ಈ ವರ್ಷ ಡಿಸೆಂಬರ್ 20ರಂದು ಚುನಾವಣೆಗೆ ದಿನಾಂಕ ನಿಗಧಿ ಮಾಡಲಾಗಿದೆಯಂತೆ. ಈ ಬಗ್ಗೆ ಕಾರ್ಯಕಾರ್ಯಿಣಿ ಸಭೆಯಲ್ಲಿ ಮಾತುಕತೆಯಾಗಿದೆ ಎನ್ನಲಾಗ್ತಿದೆ.

# ಮಹಿಳೆಗೆ ಕಿರುಕುಳ ಆರೋಪ ಮಾಜಿ ಕುಲಸಚಿವ ಪ್ರೊ. ಮೈಲಾರಪ್ಪ ಬಂಧನ



**ಬೆಂಗಳೂರು**: ಮಹಿಳೆಗೆ ಲೈಂಗಿಕ ಕಿರುಕುಳ ನೀಡಿದ ಪ್ರಕರಣದಲ್ಲಿ ಬೆಂಗಳೂರಿನ ವಿಶ್ವವಿದ್ಯಾಲಯದ ಮಾಜಿ ನಿರ್ದೇಶಕ ಹಾಗೂ ಪ್ರಾಧ್ಯಾಪಕ ಪ್ರೊ. ಬಿ.ಸಿ. ಮೈಲಾರಪ್ಪ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಬಸವೇಶ್ವರನಗರ ಠಾಣೆಯಲ್ಲಿ ಮಹಿಳೆ ನೀಡಿದ ದೂರು ಆಧಾರದಲ್ಲಿ ಪೊಲೀಸರು ಈ ಕ್ರಮ ಕೈಗೊಂಡಿದ್ದಾರೆ.

**ಸಂತ್ರಸ್ತೆಯ ವಿರುದ್ಧ ದಾಖಲಾಗಿದ್ದ ಕೇಸ್‌ನಲ್ಲಿ ಆಕೆಯ ಪರ ವಾದಿಸಿದ್ದ ಮೈಲಾರಪ್ಪ**

ಸಂತ್ರಸ್ತೆ 2022ನೇ ಸಾಲಿನ ನವೆಂಬರ್ ತಿಂಗಳಲ್ಲಿ ಅಂದಿನ ಬೆಂಗಳೂರು ವಿ.ವಿ ನಿರ್ದೇಶಕರಾದ ಪ್ರೊಫೇಸರ್ ಶ್ರೀ.ಬಿ.ಸಿ ಮೈಲಾರಪ್ಪ ನಡೆಸುತ್ತಿದ್ದ ಕರ್ನಾಟಕ ರಾಜ್ಯ ಹರಿಜನ ಸೇವಕ ಸಂಘದಲ್ಲಿ ಲಸಕ್ಕೆ ಸೇರಿದ್ದರು. ಆಗಿನಿಂದ 2 ವರ್ಷ ಅಲ್ಲಿಯೇ ಕೆಲಸ ಮಾಡಿದ್ದರು. ಈ ವೇಳೆ ಆಕೆಯ ಪತಿಯೂ ಅಸಹಜವಾಗಿ ಸಾವನ್ನಪ್ಪಿದ್ದರು. ಈ ವೇಳೆ ಪತಿಯ ಸಾವಿಗೆ ಆಕೆಯೇ ಕಾರಣವೆಂದು ಆಕೆಯ ಅತ್ತೆ, ಮಾವ ದೂರನ್ನೂ ದಾಖಲಿಸಿದ್ದರು. ಅಷ್ಟೇ ಅಲ್ಲದೆ ಸಂತ್ರಸ್ತೆಯ ಹೆಸರಿನಲ್ಲಿದ್ದ ಆಸ್ತಿಯನ್ನು ತಮಗೆ ಬರೆದುಕೊಡುವಂತೆ ಪೀಡಿಸಿದ್ದರು. ಈ ಸಮಯದಲ್ಲಿ ಬಿ.ಸಿ.ಮೈಲಾರಪ್ಪ ಆಕೆಯ ಗಂಡನ ಸಾವಿನ ಬಗ್ಗೆ ಮಹಾಲಕ್ಷ್ಮೀ ಪೊಲೀಸ್ ಠಾಣೆಯಲ್ಲಿ ದಾಖಲಾದ ಪ್ರಕರಣ ಮತ್ತು ಆಸ್ತಿ ವಿವಾದಕ್ಕೆ ಸಂಬಂಧಿಸಿದಂತೆ ಆಕೆಯ ಪರ ವಾದಿಸಿ, ಸಾಕಷ್ಟು ಓಡಾಟ ನಡೆಸಿದ್ದರು.

**ಸಾರ್ವಜನಿಕೆರುದೇ ಮಹಿಳೆಯ ಮೇಲೆ ಹಲ್ಲೆ**

ಸಂತ್ರಸ್ತೆಯ ತಂದೆಯ ಆಸ್ತಿಯ ಭಾಗದ ವಿಷಯವಾಗಿಯೂ ಹಲವು ಮನಸ್ತಾಪಗಳುಂಟಾಗಿತ್ತು. ತಂದೆ ಆಸ್ತಿಯ ಭಾಗಾಂಶಕ್ಕಾಗಿ ಸಂತ್ರಸ್ತೆ ಅಣ್ಣ, ವಕೀಲರಾದ ರಘು ಎನ್ನುವವರ ಸಹಾಯದಿಂದ ನ್ಯಾಯಾಲಯದಲ್ಲಿ ಕೇಸು ದಾಖಲಿಸಿದ್ದರು. ಈ ವಿಷಯವಾಗಿ ವಕೀಲರು ಆಗಾಗ ಸಂತ್ರಸ್ತೆಯನ್ನು ಭೇಟಿ ಮಾಡುವ ಸುದ್ದಿ ತಿಳಿದ ಮೈಲಾರಪ್ಪ ಒಂದು ಹೋಟೆಲ್ ಬಳಿ ಮಾತನಾಡಬೇಕೆಂದು ಸಂತ್ರಸ್ತೆಯನ್ನು ಕರೆಸಿಕೊಂಡಿದ್ದರು.

ಭೇಟಿ ಮಾಡಲು ಬಂದಾಗ ಆಕೆಗೆ ಒಂದಿಷ್ಟು ದಾಖಲಾತಿಗಳನ್ನು ನೀಡಿ, ಸಹಿ ಹಾಕುವಂತೆ ಹೇಳಿದ್ದರು. ದಾಖಲಾತಿ ಪರಿಶೀಲಿಸಿದಾಗ, 'ನನ್ನ ಜೀವನದಲ್ಲಿ ಏನೇ ತೊಂದರೆಯಾದರೂ ಅದಕ್ಕೆ ವಕೀಲ ರಘು ಕಾರಣ' ಎಂದು ಬರೆದಿದ್ದನ್ನು ನೋಡಿ, ಸಹಿ ಹಾಕಲು ಸಂತ್ರಸ್ತೆ ನಿರಾಕರಿಸಿದ್ದರು. ಹೀಗೆ ಬರೆದು ಸಹಿ ಹಾಕಿಸಿಕೊಳ್ಳಲು ನೀವು ಯಾರೆಂದು ಆಕೆ ಪ್ರಶ್ನಿಸಿದಾಗ ಕೋಪಗೊಂಡ ಮೈಲಾರಪ್ಪ, ನಡುರಸ್ತೆಯಲ್ಲಿಯೇ ನಿಂದಿಸಿ, ಆಕೆಯ ಜುಟ್ಟನ್ನು ಹಿಡಿದು ಹಲ್ಲೆ ನಡೆಸಿದ್ದರು.

ಇಷ್ಟಕ್ಕೇ ಸುಮ್ಮನಾಗದೇ ಮಹಿಳೆಯ ಮನೆಯ ಬಳಿ ಬಂದು ಬಾಗಿಲು ತೆರೆಯುವಂತೆ ಒತ್ತಾಯಿಸಿದ್ದರು. ಮಹಿಳೆಗೆ ಬೆದರಿಕೆ ಹಾಕಿದ್ದ ಆರೋಪದಲ್ಲಿಯೂ ಸಹ ಕಾಮಾಕ್ಷಿಪಾಳ್ಯ ದಲ್ಲಿ ಕೇಸ್ ದಾಖಲಾಗಿತ್ತು. ಆದರೂ ಆಕೆಗೆ ಕರೆ ಮಾಡಿ ಸಹಕರಿಸುವಂತೆ ಬಲವಂತಪಡಿಸಿದ್ದಾಗಿಯೂ ಮಹಿಳೆ ಹೇಳಿಕೊಂಡಿದ್ದಾರೆ. ಮಹಿಳೆಯ ದೂರಿನ ಆಧಾರ ಮೇಲೆ ಬಸವೇಶ್ವರನಗರ ಪೊಲೀಸರು ದೂರು ದಾಖಲಿಸಿಕೊಂಡಿದ್ದು, ಪ್ರೊ.ಬಿ.ಸಿ. ಮೈಲಾರಪ್ಪ ಬಂಧಿಸಿದ್ದಾರೆ

# ಅಪಘಾತವಾದ್ರೆ, ಇನ್ಮುಂದ್ರೆ?ಹೊಸ ಟೆಕ್ನಾಲಜಿ ಪರಿಚಯಿಸಿದ BTP




ಬೆಂಗಳೂರು: ಕರ್ನಾಟಕ ಸರ್ಕಾರದ ಪ್ರತಿಯೊಂದು ಕಲ್ಯಾಣ ಯೋಜನೆಯ ಸೌಲಭ್ಯಗಳನ್ನು ಪಡೆಯಲು ರೇಷನ್ ಕಾರ್ಡ್ ಅತ್ಯಗತ್ಯ ದಾಖಲೆಯಾಗಿದೆ. ಕೇವಲ ಪಡಿತರ ವಿತರಣೆಗೆ ಮಾತ್ರವಲ್ಲದೇ, ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಆದಾಯ ಪ್ರಮಾಣಪತ್ರ ಮತ್ತು ಇತರ ಸರ್ಕಾರಿ ಸೇವೆಗಳಿಗೂ ರೇಷನ್ ಕಾರ್ಡ್ ಮೂಲಭೂತ ಗುರುತಿನ ದಾಖಲೆಯಾಗಿ ಕಾರ್ಯನಿರ್ವಹಿಸುತ್ತದೆ. ಆದ್ದರಿಂದ, ರೇಷನ್ ಕಾರ್ಡ್ ಹೊಂದಿರುವ ಪ್ರತಿಯೊಬ್ಬ ನಾಗರಿಕನೂ ಸರ್ಕಾರದ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ಇಲ್ಲದಿದ್ದರೆ ಕಾರ್ಡ್ ರದ್ದುಗೊಳ್ಳುವ ಅಪಾಯವಿದೆ.

ಸರ್ಕಾರ ರೇಷನ್ ಕಾರ್ಡ್‌ಗಳಿಗೆ ಇ-ಕೆವೈಸಿ (e-KYC) ಪ್ರಕ್ರಿಯೆಯನ್ನು ಕಡ್ಡಾಯಗೊಳಿಸಿದೆ. ಇದರ ಮೂಲಕ ನಿಜವಾದ ಫಲಾನುಭವಿಗಳು ಮಾತ್ರ ಸೌಲಭ್ಯ ಪಡೆಯುವಂತೆ ಖಾತ್ರಿಪಡಿಸಲಾಗುತ್ತದೆ. ಇ-ಕೆವೈಸಿ ಮೂಲಕ ಆಧಾರ್ ಸಂಖ್ಯೆಯನ್ನು ರೇಷನ್ ಕಾರ್ಡ್‌ಗೆ ಲಿಂಕ್ ಮಾಡಬೇಕು. ಇದನ್ನು ಮಾಡದಿದ್ದರೆ ಕಾರ್ಡ್ ಸ್ವಯಂಚಾಲಿತವಾಗಿ ರದ್ದಾಗುವ ಸಾಧ್ಯತೆಯಿದೆ. ನಕಲಿ ರೇಷನ್ ಕಾರ್ಡ್‌ಗಳು, ಡೂಪ್ಲಿಕೇಟ್ ದಾಖಲೆಗಳು ಮತ್ತು ಅನರ್ಹ ಫಲಾನುಭವಿಗಳನ್ನು ಗುರುತಿಸಲು ಈ ವ್ಯವಸ್ಥೆಯನ್ನು ಜಾರಿಗೆ ತರಲಾಗಿದೆ.

ಇ-ಕೆವೈಸಿ ಪ್ರಕ್ರಿಯೆಯನ್ನು ನ್ಯಾಯಬೆಲೆ ಅಂಗಡಿಗಳಲ್ಲಿ, ಆನ್‌ಲೈನ್ ಪೋರ್ಟಲ್ ಮೂಲಕ ಅಥವಾ ನಿಮ್ಮ ಸಮೀಪದ ಆಹಾರ ಇಲಾಖೆ ಕಚೇರಿಯಲ್ಲಿ ಪೂರ್ಣಗೊಳಿಸಬಹುದು. ಬಯೋಮೆಟ್ರಿಕ್ ದೃಢೀಕರಣ (ಫಿಂಗರ್‌ಪ್ರಿಂಟ್ ಅಥವಾ ಐರಿಸ್ ಸ್ಕ್ಯಾನ್) ಮೂಲಕ ಇದನ್ನು ಮಾಡಲಾಗುತ್ತದೆ. ಈಗಾಗಲೇ ಅನೇಕ ಕುಟುಂಬಗಳು ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಿವೆ. ಆದರೆ ಇನ್ನೂ ಕೆಲವರು ನಿರ್ಲಕ್ಷ್ಯ ತೋರಿದ್ದಾರೆ. ತಕ್ಷಣ ಇ-ಕೆವೈಸಿ ಮಾಡಿಸಿ, ಇಲ್ಲದಿದ್ದರೆ ಪಡಿತರ ಮತ್ತು ಇತರ ಸೌಲಭ್ಯಗಳಿಂದ ವಂಚಿತರಾಗುತ್ತೀರಿ ಎಂದು ಸರ್ಕಾರ ಎಚ್ಚರಿಕೆ ನೀಡಿದೆ.

ಅನ್ನಭಾಗ್ಯ ಯೋಜನೆಯಡಿ ಉಚಿತ ಅಕ್ಕಿ ಮತ್ತು ಇತರ ಪಡಿತರಗಳನ್ನು ಪಡೆಯದೇ ಇರುವ ಬಿಪಿಎಲ್ ಕಾರ್ಡ್‌ಗಳನ್ನು ರದ್ದುಗೊಳಿಸಲು ಸರ್ಕಾರ ಮುಂದಾಗಿದೆ. ಕನಿಷ್ಠ 6 ತಿಂಗಳುಗಳ ಕಾಲ ಪಡಿತರ ಪಡೆಯದ ಕುಟುಂಬಗಳ ಕಾರ್ಡ್‌ಗಳ ಮೇಲೆ ಸಮೀಕ್ಷೆ ನಡೆಸಲಾಗುತ್ತಿದೆ. ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ಈ ಕಾರ್ಯವನ್ನು ಕೈಗೊಂಡಿದೆ.

ಕೆಲವರು ಪಡಿತರ ಪಡೆಯದೇ ಕೇವಲ ಸರ್ಕಾರಿ ಯೋಜನೆಗಳಾದ ವಸತಿ, ಉದ್ಯೋಗ ಭರವಸೆ, ಆರೋಗ್ಯ ಯೋಜನೆಗಳಲ್ಲಿ ಬಿಪಿಎಲ್ ಕಾರ್ಡ್ ಬಳಸಿಕೊಳ್ಳುತ್ತಿದ್ದಾರೆ ಎಂಬ ದೂರುಗಳು ಸರ್ಕಾರದ ಗಮನಕ್ಕೆ ಬಂದಿವೆ. ಇದರಿಂದ ನಿಜವಾದ ಬಡವರಿಗೆ ಸೌಲಭ್ಯ ತಲುಪುತ್ತಿಲ್ಲ. ಆದ್ದರಿಂದ, ಪಡಿತರ ಚೀಟಿಯ ದುರ್ಬಳಕೆ ತಡೆಯಲು ಈ ಸಮೀಕ್ಷೆ ನಡೆಸಲಾಗುತ್ತಿದೆ. ಸಮೀಕ್ಷೆಯಲ್ಲಿ ಅನರ್ಹರೆಂದು ಕಂಡುಬಂದಲ್ಲಿ ಕಾರ್ಡ್ ತಕ್ಷಣ ರದ್ದಾಗುತ್ತದೆ. ಆದರೆ ನಿಜವಾದ ಫಲಾನುಭವಿಗಳು ತಮ್ಮ ಕಾರ್ಡ್ ಉಳಿಸಿಕೊಳ್ಳಲು ಪ್ರತಿ ತಿಂಗಳು ಪಡಿತರ ಪಡೆಯುವುದು ಕಡ್ಡಾಯ.

ಅನ್ನಭಾಗ್ಯ ಯೋಜನೆಯಡಿ ನ್ಯಾಯಬೆಲೆ ಅಂಗಡಿಗಳ ಮೂಲಕ ಪಡೆಯುವ ಅಕ್ಕಿ, ಗೋಧಿ ಮತ್ತು ಇತರ ಪಡಿತರಗಳನ್ನು ಕಪ್ಪುಮಾರುಕಟ್ಟೆಯಲ್ಲಿ ಅಥವಾ ತೆರೆದ ಮಾರುಕಟ್ಟೆಯಲ್ಲಿ ಮಾರಾಟ ಮಾಡುವುದು ಗಂಭೀರ ಅಪರಾಧವಾಗಿದೆ. ಇಂತಹ ಪ್ರಕರಣಗಳು ಪತ್ತೆಯಾದಲ್ಲಿ ಆಹಾರ ಇಲಾಖೆಯು ದೂರು ದಾಖಲಿಸಿ, ಪ್ರಕರಣ ರಿಜಿಸ್ಟರ್ ಮಾಡುತ್ತದೆ. ದಂಡ, ಜೈಲು ಶಿಕ್ಷೆ ಅಥವಾ ಕಾರ್ಡ್ ರದ್ದು ಸೇರಿದಂತೆ ಕಠಿಣ ಕ್ರಮಗಳು ಜಾರಿಯಾಗುತ್ತವೆ.

# ಹೆಸ್ಕಾಂನಿಂದ ಸರ್ಕಾರಿ ಕಚೇರಿಗಳ ಪವರ್ ಕಟ್

**ಕಾರವಾರ**: ರಾಜ್ಯ ಸರ್ಕಾರ ಗ್ಯಾರಂಟಿ ಯೋಜನೆ ಮೂಲಕ ಜನರಿಗೆ ಉಚಿತ ಸವಲತ್ತು ನೀಡುತ್ತಿದೆ. ಆದರೆ, ಸರ್ಕಾರಿ ಕಚೇರಿಗಳ ವಿದ್ಯುತ್ ಬಿಲ್ ಸಹ ಪಾವತಿ ಮಾಡಲಾಗದೇ ಕತ್ತಲಲ್ಲಿ ಮುಳುಗುವಂತಾಗಿದೆ. ಹೆಸ್ಕಾಂ ವಿಭಾಗದ ಏಳು ಜಿಲ್ಲೆಗಳಲ್ಲಿ 13.15 ಕೋಟಿ ಸರ್ಕಾರಿ ಕಚೇರಿಗಳ ಬಿಲ್ ಬಾಕಿ ಉಳಿಸಿಕೊಂಡಿದೆ. ಇದೀಗ ಹೆಸ್ಕಾಂ ಇಲಾಖೆ ಹಣ ತುಂಬದ ಸರ್ಕಾರಿ ಕಚೇರಿಗಳ ವಿದ್ಯುತ್ ಕಡಿತದ ಶಾಕ್ ನೀಡಿದೆ. ಹೌದು, ಗುರುವಾರ ಕಾರವಾರದಲ್ಲಿ ಹಲವು ಸರ್ಕಾರಿ ಕಚೇರಿಗೆ ಕತ್ತಲ ದಿನವಾಗಿತ್ತು. ಉತ್ತರ ಕನ್ನಡ ಜಿಲ್ಲೆಯ ಕಾರವಾರದ ಜಿಲ್ಲಾಧಿಕಾರಿ ಕಟ್ಟಡದಲ್ಲಿ ಇರುವ ಎಸಿ ಕಚೇರಿ ಹಾಗೂ ತಹಶಿಲ್ದಾರ್, ನೋಂದಣಾಧಿಕಾರಿ ಕಚೇರಿ ಹೀಗೆ ಕಾರವಾರದಲ್ಲಿ ಇದ್ದ 15 ಕ್ಕೂ ಹೆಚ್ಚು ಕಚೇರಿಯ ವಿದ್ಯುತ್ ಸಂಪರ್ಕವನ್ನು ಕಡಿತ ಮಾಡಿತ್ತು.

ಹೆಸ್ಕಾಂಗೆ ಪಾವತಿಸಬೇಕಾದ ವಿದ್ಯುತ್ ಬಿಲ್ ಪಾವತಿಸದೇ ಕಳೆದ ಒಂದು ವರ್ಷದಿಂದ ಹೆಸ್ಕಾಂ ನೀಡಿದ ನೋಟಿಸ್‌ಗೂ ಉತ್ತರ ನೀಡದ ಅಧಿಕಾರಿಗಳ ವರ್ತನೆಯಿಂದಾಗಿ ಜನರಿಗೆ 200 ಯುನಿಟ್ ಫ್ರೀಯಾಗಿ ನೀಡಿ ಆರ್ಥಿಕ ಕೊರತೆ ಅನುಭವಿಸುತ್ತಿರುವ ಹೆಸ್ಕಾಂ ಇಲಾಖೆ ಹಣ ವಸೂಲಿಗಾಗಿ ಇದೀಗ ಸರ್ಕಾರಿ ಕಚೇರಿಯ ವಿದ್ಯುತ್ ಕಡಿತ ಮಾಡಿದೆ. ಕಾರವಾರ ಭಾಗದ 15 ಸರ್ಕಾರಿ ಕಚೇರಿಗಳ ವಿದ್ಯುತ್ ಸಂಪರ್ಕ ಕಡಿತ ಮಾಡಿದ್ದು, ಇದರಿಂದಾಗಿ ದಿನ ನಿತ್ಯ ನಡೆಯಬೇಕಾದ ಕಾರ್ಯಗಳು ಅಡ್ಡಿಯಾಗುವಂತೆ ಆಗಿದೆ. ಸಾರ್ವಜನಿಕರಿಗೆ ಆಗಬೇಕಾದ ಕಾರ್ಯಗಳು ಆಗದೇ ಶಾಪ ಹಾಕುವಂತಾಯಿತು.

ಹೆಸ್ಕಾಂ ವ್ಯಾಪ್ತಿಗೆ ರಾಜ್ಯದ ಉತ್ತರ ಕನ್ನಡ, ಹಾವೇರಿ, ಬೆಳಗಾವಿ, ಗದಗ, ಬಿಜಾಪುರ, ಬಾಗಲಕೋಟೆ, ಹುಬ್ಬಳ್ಳಿ-ಧಾರವಾಡ ಜಿಲ್ಲೆಗಳು ಸೇರುತ್ತವೆ. ಕಳೆದ ಎಂಟು ತಿಂಗಳಿಂದಲೂ ರಾಜ್ಯ ಸರ್ಕಾರ ಸ್ವಾಮ್ಯದ ಜಿಲ್ಲಾ, ತಾಲೂಕು ಕಚೇರಿಗಳು ಒಟ್ಟು 13.15 ಕೋಟಿ ವಿದ್ಯುತ್ ಬಿಲ್ ಬಾಕಿ ಇರಿಸಿಕೊಂಡಿದೆ. ಉತ್ತರ ಕನ್ನಡ ಜಿಲ್ಲೆಯ ಕಾರವಾರ ತಾಲೂಕಿನೊಂದರಲ್ಲೇ 2,18,25,000 ರೂ. ಬಾಕಿ ಇವೆ.ಇವುಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ 60,37,980 ರೂ., ಗ್ರಾಮೀಣಾಭಿವೃದ್ಧಿ ಇಲಾಖೆ (ಬೀದಿ ದೀಪ, ಕುಡಿಯುವ ನೀರು, ಕಚೇರಿ ಸೇರಿ) 4.89 ಕೋಟಿ ರೂ., ಬಹು ಗ್ರಾಮ ಕುಡಿಯುವ ನೀರಿನ ಯೋಜನೆ ಇಲಾಖೆಗೆ 1.57 ಕೋಟಿ ರೂ., ನಗರಾಭಿವೃದ್ಧಿ ಇಲಾಖೆ (ಬೀದಿ ದೀಪ, ಕುಡಿಯುವ ನೀರು, ಕಚೇರಿ ಸೇರಿ) 1.29 ಕೋಟಿ ರೂ., ಶಿಕ್ಷಣ ಇಲಾಖೆ (ಶಾಲೆಗಳು ಸೇರಿ) 67.78 ಲಕ್ಷ ರೂ., ಕರ್ನಾಟಕ ನೀರಾವರಿ ನಿಗಮ 60.93 ಲಕ್ಷ ರೂ., ಆರೋಗ್ಯ ಇಲಾಖೆ (ಆಸ್ಪತ್ರೆಗಳು ಸೇರಿ) 48.87 ಲಕ್ಷ ರೂ., ಅರಣ್ಯ ಇಲಾಖೆ 31.47 ಲಕ್ಷ ರೂ., ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ (ಅಂಗನವಾಡಿಗಳು ಸೇರಿ) 16.85 ಲಕ್ಷ ರೂ., ಕಂದಾಯ ಇಲಾಖೆ (ಮುಜರಾಯಿ ಸೇರಿ) 15.05 ಲಕ್ಷ ರೂ., ಗೃಹ ಇಲಾಖೆ 13.21 ಲಕ್ಷ ಬಾಕಿ ಉಳಿಸಿಕೊಂಡಿವೆ. ಹೆಸ್ಕಾಂ ನಷ್ಟವಾಗುವ ಸಂಬಂಧ ಇದೀಗ ಹಣ ವಸೂಲಿಗಾಗಿ ಈ ಕಚೇರಿಗಳ ವಿದ್ಯುತ್ ನಿಲುಗಡೆ ಮಾಡಿದೆ.

ಸರ್ಕಾರಿ ಕಚೇರಿಗಳ ವಿದ್ಯುತ್ ಬಿಲ್‌ಗಳನ್ನು ಹಲವು ಇಲಾಖೆಗಳು ಕಳೆದ ಒಂದು ವರ್ಷದಿಂದ ಪಾವತಿಸಿಲ್ಲ. ನೋಟಿಸ್ ನೀಡಿದರೂ ಉತ್ತರ ನೀಡಿಲ್ಲ. ವಿದ್ಯುತ್ ಕೊರತೆ ಇದ್ದು, ಜನರಿಗೆ ವಿದ್ಯುತ್ ನೀಡಲು ವಿದ್ಯುತ್ ಖರೀದಿ ಮಾಡಬೇಕು. ಇದಕ್ಕೆ ಹಣದ ಅವಶ್ಯಕತೆ ಇದೆ. ಹೀಗಾಗಿ, ಈ ಅಭಿಯಾನ ಪ್ರಾರಂಭ ಮಾಡಿದ್ದೇವೆ ಎಂದು ಕಾರವಾರ-ಅಂಕೋಲ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ಪೆಡ್ನೇಕರ್ ಮಾಹಿತಿ ನೀಡಿದ್ದಾರೆ.

ಸುದ್ದಿ ಹಾಗೂ ಜಾಹಿರಾತುಗಳಿಗಾಗಿ ಸಂಪರ್ಕಿಸಿ:
9538786812 / 9880655634

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.